ಸಂಪುಟ : 8 ಸಂಚಿಕೆ : 161 ಪುಟ : 4 ಬೆಲೆ : 3.00 ಶನಿವಾರ ಜುಲೈ 29, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 161 Pages : 4 Price : 3.00 Saturday July 29, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೀರು ಪೂರೈಕೆ ಮಾಹಿತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಶನಿವಾರ ನೀರು ಪೂರೈಕೆಯಾಗುವ ಸ್ಥಳಗಳ ಮಾಹಿತಿ ಹೀಗಿದೆ.

ವಾರ್ಡ್ ನಂ.2ರ ವೆಲ್‌ಫೇರ್ ಟೌನ್‌ಶಿಪ್, ವಾರ್ಡ್ ನಂ.4ರ ಟರ್ನಲ್ ಪೇಟೆ, ವಾರ್ಡ್ ನಂ.34ರ ವಡ್ಡರಗೇರಿ, 46 ಪ್ಲಾಟ್ ಮೂರಶೀಳ್ಳಿನ ವಠಾರ, ವಾರ್ಡ್ ನಂ.11-12ರ ಇರಾಣಿ ಕಾಲನಿ, ಕರಿಯಮ್ಮಕಲ್ಲು ಬಡಾವಣೆ, ವಾರ್ಡ್ ನಂ.35ರ ರಾಮನಗರ, ಬಾಪೂಜಿ ನಗರ, ವಾರ್ಡ್ ನಂ.13ರ ಸಂಜೀವಿನಿ ಆಸ್ಪತ್ರೆ, ಭಾಗಮಾರ ಲೈನ್, ಕೊಳಚೆ ಪ್ರದೇಶಗಳಲ್ಲಿ ನೀರು ಪೂರೈಕೆಯಾಗಲಿದೆ.

ಗದಗ ಭಾಗದಲ್ಲಿ ಬರುವ ಡಿ ಆಯ್ ಪೈಪ್‌ಲೈನ್ ಡಂಬಳನಾಕಾದಲ್ಲಿ ಲೀಕೇಜ್ ದುರಸ್ತಿ ನಡೆಯುತ್ತಿರುವುದರಿಂದ ಗದಗ ಭಾಗಕ್ಕೆ ನೀರು ಸರಬರಾಜು ವಿಳಂಬವಾಗಲಿದೆ. ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ಪ್ರಕಟಣೆ ತಿಳಿಸಿದೆ.

## ಜಿಲ್ಲಾ ಕ್ರೀಡಾಂಗಣದಲ್ಲಿ ಸ್ಕೇಟಿಂಗ್ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸುಸಜ್ಜಿತವಾದ ಸ್ಕೇಟಿಂಗ್ ಕ್ರೀಡಾ ಅಂಕಣವಿದ್ದು, ಪ್ರತಿದಿನ ಬೆಳಿಗ್ಗೆ 7-00 ಗಂಟೆಯಿಂದ 8-30 ಹಾಗೂ ಸಾಯಂಕಾಲ 5-30 ರಿಂದ 7-00 ಗಂಟೆಯವರೆಗೆ ನುರಿತ ತರಬೇತುದಾರರಿಂದ ಸ್ಕೇಟಿಂಗ್ ತರಬೇತಿಯನ್ನು ನೀಡಲಾಗುತ್ತದೆ. ಆಸಕ್ತ ಕ್ರೀಡಾಪಟುಗಳು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ದೂರವಾಣಿ ಸಂಖ್ಯೆ 08372-238345 ಅಥವಾ 9980322548 ರ ಮೂಲಕ ಸಂಪರ್ಕಿಸಲು ಕೋರಲಾಗಿದೆ.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಜುಲೈ 30 ರಂದು ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಶ್ರೀ ಹರಳಯ್ಯ ಉದ್ಯಾನವನದಲ್ಲಿ ಶಿವಾನಂದಯ್ಯ ಶಾಸ್ತ್ರೀಯರವರಿಂದ "ಸುಗಮ ಸಂಗೀತ", ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಬೆಟದಯ್ಯಶಾಸ್ತ್ರಿ ಹಿರೇಮಠ ಇವರಿಂದ "ಸುಗಮ ಸಂಗೀತ", ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಶ್ರೀ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಪ್ರಣಮ್ ನಾಗರಾಗ ಇವರಿಂದ "ಜನಪದ ಸಂಗೀತ" ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಡಿಎಸ್ ಜಿಲ್ಲಾ ಮಟ್ಟದ ಸಭೆ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಜಾತ್ಯತೀತ ಜನತಾದಳ ಪಕ್ಷದ ಜಿಲ್ಲಾ ಮಟ್ಟದ ಸಭೆಯನ್ನು ಜುಲೈ 30, ಭಾನುವಾರ ಮಧ್ಯಾಹ್ನ 12 ಗಂಟೆಗೆ ರಿಂಗ್ ರೋಡ್‌ನಲ್ಲಿರುವ ಕರ್ನಾಟಕ ಭವನದಲ್ಲಿ ಕರೆಯಲಾಗಿದೆ.

ಈ ಸಭೆಯಲ್ಲಿ ಮಾಜಿ ಸಚಿವರು, ರಾಜ್ಯ ಕಾರ್ಯಾಧ್ಯಕ್ಷರಾದ ಆಲ್ಕೋಡ್ ಹನುಮಂತಪ್ಪ ಹಾಗೂ ಗದಗ ಜಿಲ್ಲಾ ಮಾಜಿ ಅಧ್ಯಕ್ಷ ಅಂದಾನಯ್ಯ ಕುರ್ತಕೋಟಿಮಠ ಉಪಸ್ಥಿತರಿರುವರು. ಸಭೆಯಲ್ಲಿ ಗದಗ ಜಿಲ್ಲಾಧ್ಯಕ್ಷರ ನೇಮಕದ ಕುರಿತು, ಮುಂಬರುವ ತಾಲೂಕು ಪಂಚಾಯತ, ಜಿಲ್ಲಾ ಪಂಚಾಯತ, ಲೋಕಸಭಾ ಚುನಾವಣೆ ತಯಾರಿ ಕುರಿತು ಸಂಘಟನಾತ್ಮಕ ವಿಷಯಗಳನ್ನು ಚರ್ಚಿಸಲಿದ್ದಾರೆ.

ಜಿಲ್ಲೆಯಲ್ಲಿ ಪಕ್ಷ ಸಂಘಟನೆಯ ಗುರಿ ಇಟ್ಟುಕೊಂಡು ಜಿಲ್ಲಾ ಹಾಗೂ ತಾಲೂಕು ಹೊಸ ಪದಾಧಿಕಾರಿಗಳ ನೇಮಕದ ಕುರಿತು ಚರ್ಚಿಸಲಿದ್ದಾರೆ. ಆದ್ದರಿಂದ, ಗದಗ ಜಿಲ್ಲಾ/ತಾಲೂಕು ಎಲ್ಲಾ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಉಪಸ್ಥಿತರಿರಲು ಗದಗ ಜಿಲ್ಲಾ ಜೆಡಿಎಸ್ ವಕ್ತಾರ ರಮೇಶ ಕಲಬುರ್ಗಿ ವಿನಂತಿಸಿದ್ದಾರೆ.

## ಜಿ. ಪಂ. ಉಪಕಾರ್ಯದರ್ಶಿಯಾಗಿ ಸಿ.ಆರ್.ಮುಂಡರಗಿ ಅಧಿಕಾರ ಸ್ವೀಕಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತನ ನೂತನ ಉಪ ಕಾರ್ಯದರ್ಶಿಯಾಗಿ ಸಿ.ಆರ್.ಮುಂಡರಗಿ ಅವರು ಜು.28 ರಂದು ಅಧಿಕಾರಿ ಸ್ವೀಕರಿಸಿದರು. ಈ ಮುನ್ನ ಅವರು ಜಿಲ್ಲಾ ಪಂಚಾಯತನ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಅವರಿಗೆ ಜಿಲ್ಲಾ ಪಂಚಾಯತನ ವಿವಿಧ ಶಾಖೆಗಳ ಮುಖ್ಯಸ್ಥರು, ಸಿಬ್ಬಂದಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಶುಭ ಕೋರಿದ್ದಾರೆ.

### ಜಿಲ್ಲೆಯಲ್ಲಿ ನಿರಂತರ ಮಳೆ ಹಿನ್ನೆಲೆ-ಪರಿಸ್ಥಿತಿ ನಿಭಾಯಿಸಲು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಡಿಸಿ ಸೂಚನೆ

# ಕೇಂದ್ರ ಸ್ಥಾನದಲ್ಲಿದ್ದು ಸಮರ್ಪಕವಾಗಿ ಕಾರ್ಯನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗುವ ಪ್ರವಾಹ ಹಾಗೂ ಅತಿವೃಷ್ಟಿ ಪರಿಸ್ಥಿತಿಯನ್ನು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿಯೇ ಇದ್ದು ಸಮರ್ಪಕವಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯತ ಹಾಗೂ ಜಿಲ್ಲಾ ಪಂಚಾಯತ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಿರಂತರ ಮಳೆಯಿಂದಾಗಿ ತಗ್ಗು ಪ್ರದೇಶಗಳಿಗೆ ನೀರು ನುಗ್ಗುವ ಸಂಭವವಿರುತ್ತದೆ. ತಗ್ಗು ಪ್ರದೇಶದಲ್ಲಿನ ಜನ, ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸಂದರ್ಭಾನುಸಾರ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ತಿಳುವಳಿಕೆ ನೀಡಬೇಕು. ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಮನೆಗಳಲ್ಲಿ ವಾಸಿಸುವವರನ್ನು ಗುರುತಿಸಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಮನ ಒಲಿಸುವದರ ಮೂಲಕ ಸಂಭವನೀಯ ಜೀವ ಹಾನಿ ತಡೆಗಟ್ಟಲು ಅಗತ್ಯವಿರುವ ಎಲ್ಲ ಮುಂಜಾಗೃತಾ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ತಿಳಿಸಿದರು.

ಮಳೆ ನೀರು ಸರಾಗವಾಗಿ ಹರಿದು ಹೋಗಲು ಅನುಕೂಲವಾಗುವಂತೆ ಗ್ರಾಮಗಳಲ್ಲಿನ ಚರಂಡಿ, ಕಾಲುವೆಗಳನ್ನು ಸ್ವಚ್ಛಗೊಳಿಸಬೇಕು. ಅಲ್ಲದೇ ರೈತರು ತಮ್ಮ ಜಾನುವಾರುಗಳನ್ನು ವಿದ್ಯುತ್ ಕಂಬಳಿಗೆ ಕಟ್ಟದಂತೆ ಹಾಗೂ ಗ್ರಾಮಗಳಲ್ಲಿನ ಕೆರೆ, ನದಿ ದಡಕ್ಕೆ ಸಾರ್ವಜನಿಕರು, ಜಾನುವಾರುಗಳನ್ನು ಒಯ್ಯದಂತೆ ಜಾಗೃತಿ ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



> ನಿರಂತರ ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರುಡುವ ಸಂಭವವಿದ್ದು, ಜನ ಸಾಮಾನ್ಯರು ಶುದ್ಧ ಕುಡಿಯುವ ನೀರಿನ ಬಳಕೆ ಮಾಡುವಂತೆ ಅರಿವು ಮೂಡಿಸಬೇಕು. ಕುಡಿಯುವ ನೀರಿನ ಶುದ್ಧತೆ ಕುರಿತು ಅನುಮಾನವಿದ್ದಲ್ಲಿ ತಕ್ಷಣವೇ ನೀರನ್ನು ಪರೀಕ್ಷೆಗೊಳಪಡಿಸಬೇಕು. ಹಾಗೂ ಆರೋಗ್ಯ ಸುರಕ್ಷತೆಗಾಗಿ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಬೇಕು.
>
> **-ವೈಶಾಲಿ.ಎಂ.ಎಲ್.** ಜಿಲ್ಲಾಧಿಕಾರಿಗಳು, ಗದಗ

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಗಳಲ್ಲಿ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಯೋಜನೆ ರೂಪಿಸಿಕೊಂಡು ಜನ, ಜಾನುವಾರು ಜೀವ ಹಾನಿಯಾಗದಂತೆ ಎಲ್ಲ ಇಲಾಖೆಗಳೊಂದಿಗೆ ನಿರಂತರವಾಗಿ ಸಮನ್ವಯ ಸಾಧಿಸಬೇಕು. ಹಾಗೂ ಗ್ರಾಮಗಳ ಪ್ರವಾಹ ಪರಿಸ್ಥಿತಿ ಕುರಿತು ಮೇಲಾಧಿಕಾರಿಗಳಿಗೆ ಕಾಲ ಕಾಲಕ್ಕೆ ಮಾಹಿತಿ ಒದಗಿಸುವಂತೆ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್. ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಮುಖ್ಯ ಯೋಜನಾಧಿಕಾರಿ ವಾಗೀಶ್, ಯೋಜನಾ ನಿರ್ದೇಶಕ ಎಂ.ವಿ.ಚಳಗೇರಿ ಸೇರಿದಂತೆ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

### ಸಂಪೂರ್ಣ ಉಳಿತಾಯ ಗ್ರಾಮಗಳ ಘೋಷಣಾ ಕಾರ್ಯಕ್ರಮ

## ಮಹಿಳಾ ಸಮ್ಮಾನ್ ಉಳಿತಾಯ ಯೋಜನೆ ಯಶಸ್ಸಿಗೆ ಶ್ರಮಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳಾ ಸಮ್ಮಾನ್ ಉಳಿತಾಯ ಸರ್ಟಿಫಿಕೇಟ್ ಯೋಜನೆಯಲ್ಲಿ ದೇಶದ ಎಲ್ಲಾ ಮಹಿಳೆಯರು ಯಾವುದೇ ವಯಸ್ಸಿಯ ಮಿತಿಯಿಲ್ಲದೆ ಕನಿಷ್ಠ ಒಂದು ಸಾವಿರದಿಂದ ಗರಿಷ್ಠ 2 ಲಕ್ಷದವರೆಗೆ ಹಣವನ್ನು ಯಾವುದೇ ಅಂಚೆ ಕಚೇರಿಯಲ್ಲಿಯಾದರೂ ತೊಡಗಿಸಬಹುದು. ಇದಕ್ಕೆ ಇಲಾಖೆಯಿಂದ ಶೇ.7.5ರಷ್ಟು ವಾರ್ಷಿಕ ಬಡ್ಡಿಯನ್ನು ನೀಡಲಾಗುತ್ತದೆ. ಈ ಯೋಜನೆಯು ಕೇವಲ ಎರಡು ವರ್ಷದ ಅವಧಿಯವರೆಗೆ ಮಾತ್ರ ಜಾರಿಯಲ್ಲಿದ್ದು, 31/03/2025ಕ್ಕೆ ಮುಕ್ತಾಯಗೊಳ್ಳುತ್ತದೆ ಎಂದು ಗದಗ ಅಂಚೆ ವಿಭಾಗದ ಅಧೀಕ್ಷಕ ಚಿದಾನಂದ ಪದ್ಮಶಾಲಿ ಮಾಹಿತಿ ನೀಡಿದರು.

> ದಿನಾಂಕ 1/4/2023ರಿಂದ ಮಹಿಳಾ ಸಮ್ಮಾನ್ ಉಳಿತಾಯ ಸರ್ಟಿಫಿಕೇಟ್ ಯೋಜನೆಯಡಿ ತೆರೆದ ಹೊಸ ಖಾತೆಗಳ ಸಂಖ್ಯೆ: ಗದಗ ಜಿಲ್ಲೆಯಲ್ಲಿ 2233 ಖಾತೆಗಳು, ತೊಡಗಿಸಿದ ಹಣ-8,72,06,600 ರೂ. ಕೊಪ್ಪಳ ಜಿಲ್ಲೆಯಲ್ಲಿ 1633 ಖಾತೆಗಳು, ತೊಡಗಿಸಿದ ಹಣ-9,42,55,400 ರೂ. ಗದಗ ಅಂಚೆ ವಿಭಾಗದಲ್ಲಿ ತೆರೆದ ಹೊಸ ಖಾತೆಗಳು-3866, ತೊಡಗಿಸಿದ ಹಣ 18,14,62,000 ರೂ ಆಗಿದೆ ಎಂದು ಗದಗ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಮಾಹಿತಿ ನೀಡಿದರು.

ಪಟ್ಟಣದ ಅಂಚೆ ಕಚೇರಿಯಲ್ಲಿ ಹಮ್ಮಿಕೊಂಡ ಸಂಪೂರ್ಣ ಮಹಿಳಾ ಸಮ್ಮಾನ್ ಉಳಿತಾಯ ಗ್ರಾಮಗಳ ಘೋಷಣಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹೊಸ ಉಳಿತಾಯ ಯೋಜನೆಯು ಮಹಿಳೆಯರಿಗೆ ಅನುಕೂಲಕರವಾಗಿದ್ದು, ಎಲ್ಲಾ ಮಹಿಳೆಯರು ಈ ಯೋಜನೆಯ ಪ್ರಯೋಜನ ಪಡೆಯುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಗದಗ ಉಪ ವಿಭಾಗದ ನಾಲ್ಕು ಗ್ರಾಮಗಳನ್ನು ಸಂಪೂರ್ಣ ಗ್ರಾಮಗಳನ್ನಾಗಿ ಘೋಷಣೆ ಮಾಡಲಿಯಿತು. ಈ ಯೋಜನೆಯಲ್ಲಿ ಲಕ್ಷ್ಮೇಶ್ವರ ಉಪ ಅಂಚೆ ಕಚೇರಿ ವ್ಯಾಪ್ತಿಯಲ್ಲಿ ಬರುವ ಆದ್ರಹಳ್ಳಿ ▸▸3ನೇ ಪುಟಕ್ಕೆ

## ಮೂವರಿಂದ ರೈತನ ಹಣ ಕಳ್ಳತನ; ಸಿಸಿ ಕ್ಯಾಮೆರಾದಲ್ಲಿ ದೃಶ್ಯ ಸೆರೆ


■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

.ಪಟ್ಟಣದಲ್ಲಿ ಶುಕ್ರವಾರ ರಸಗೊಬ್ಬರ ಅಂಗಡಿಯಲ್ಲಿ ರೈತನೋರ್ವನ ಕಿಸೆಯಿಂದ 22500 ರೂ ಕಳ್ಳತನ ಮಾಡಿ ಪರಾರಿಯಾದ ಘಟನೆ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ತಾಲೂಕಿನ ರಣತೂರ ಗ್ರಾಮದ ರೈತ ಮುತ್ತಪ್ಪ ಬಸಪ್ಪ ಓಲಿ ಎಂಬಾತ ಪಟ್ಟಣದ ಗೊಬ್ಬರ ಅಂಗಡಿಯಲ್ಲಿ ಕಳೆನಾಶಕ ಸಿಂಪಡಣೆ ಖರೀದಿಗೆ ಬಂದು ಕುಳಿತುಕೊಂಡಿದ್ದಾರೆ. ಇವರ ಮೇಲ್ಗಿಸೆಯಲ್ಲಿರುವ ದುಡ್ಡನ್ನು ಗಮನಿಸಿದ ಓರ್ವ ಮಹಿಳೆ ಇಬ್ಬರು ಪುರುಷರು ಇದೇ ಅಂಗಡಿಯಲ್ಲಿ ತರಕಾರಿ ಬೀಜ ಮತ್ತು ಕರಕಿನಾಶಕ ಔಷಧ ಖರೀದಿ ನೆಪದಲ್ಲಿ ತಂತ್ರಮಾಡಿ ರೈತನ ಕಿಸೆಯಲ್ಲಿದ್ದ 22500 ರೂ ಯಾಮರಿಸಿ ಪರಾರಿಯಾಗಿದ್ದಾರೆ. ದುಡ್ಡು ಕಳೆದುಕೊಂಡ ರೈತ ತೀವ್ರ ಆತಂಕ್ಕೀಡಾದುದನ್ನು ಮನಗಂಡ ಅಂಗಡಿಯವರು ರೈತನನ್ನು ಸಮಾಧಾನಪಡಿಸಿ ಪೊಲೀಸರಿಗೆ ವಿಷಯ ತಲುಪಿಸಿದ್ದಾರೆ. ಸ್ಥಳಕ್ಕೆ ಬೇಟಿ ನೀಡಿದ ಪೊಲೀಸರು ಸಿಸಿ ಕ್ಯಾಮರಾ ಪರಿಶೀಲಿಸಿ ಕಳ್ಳರು ಆಂದ್ರದ ಮೂಲದವರಿರಬಹುದೆಂದು ಶಂಕಿಸಿ ಪತ್ತೇ ಮಾಡುವುದಾಗಿ ಹೇಳಿದ್ದಾರೆ.

ಒಟ್ಟಿನಲ್ಲಿ ಶುಕ್ರವಾರ ಸಂತೆ ದಿನ, ಅಮವಾಸ್ಯೆ ವೇಳೆ ಪಟ್ಟಣದಲ್ಲಿ ಕಳ್ಳತನದ ಘಟನೆಗಳು ನಡೆಯುತ್ತಲೇ ಇದ್ದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಶುಕ್ರವಾರದ ಸಂತೆಗೆ ಲಕ್ಷಾಂತರ ಜನ ಸೇರುವುದನ್ನು ಅರಿತ ಕಳ್ಳರ ▸▸3ನೇ ಪುಟಕ್ಕೆ

## ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ಜುಲೈ 29 ರಂದು ಮುಂಜಾನೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ 7.30ಕ್ಕೆ ಗದಗೆ ಆಗಮಿಸುವರು. ನಂತರ 10.45 ಗಂಟೆಗೆ ಹೊಸ ಬಸನಿಲ್ದಾಣದಿಂದ ಬಿಂಕದಕಟ್ಟಿ ಮೃಗಾಲಯಕ್ಕೆ ಬಸ್ ಸೌಲಭ್ಯಕ್ಕೆ ಹಸಿರು ನಿಶಾನೆ ತೋರಿಸುವರು. ನಂತರ ಅದೇ ಬಸ್‌ನಲ್ಲಿ ಹೊಸ ಬಸ್ ನಿಲ್ದಾಣದಿಂದ ಬಿಂಕದಕಟ್ಟಿ ಮೃಗಾಲಯದವರೆಗೆ ಪ್ರಯಾಣ ಬೆಳೆಸುವರು. 11 ಗಂಟೆಗೆ ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯದಲ್ಲಿ ಜರುಗುವ ವಿಶ್ವ ಹುಲಿ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12.30 ಗಂಟೆಗೆ ಬೆಟಗೇರಿಯ ಬಸವೇಶ್ವರ ನಗರದ ಶರಣ ಬಸವೇಶ್ವರ ಹೈಸ್ಕೂಲ ಹಿಂದುಗಡೆ ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ರಿಂದ 7.30 ಗಂಟೆಯವರೆಗೆ ನಗರದ ಕಾಟನ್ ಸೇಲ್ ಸೊಸೈಯಟಿ ಆವರಣದಲ್ಲಿರುವ ಸಚಿವರ ಕಾರ್ಯಾಲದಯಲ್ಲಿ ಸಾರ್ವಜನಿಕರ ಭೇಟಿ ನಡೆಸಿ ವಾಸ್ತವ್ಯ ಮಾಡುವರು.

ಜುಲೈ 30 ರಂದು ಬೆಳಗ್ಗೆ 9 ಗಂಟೆಗೆ ಹುಲಕೋಟಿಯಲ್ಲಿ ನೂತನವಾಗಿ ನಿರ್ಮಿಸಿರುವ ಹೊಸ ಬಸ್ ನಿಲ್ದಾಣ ವೀಕ್ಷಿಸುವರು. ಬೆಳಗ್ಗೆ 11 ಗಂಟೆಗೆ ನಗರದ ಕನಕ ಭವನದಲ್ಲಿ ಜರುಗುವ ಮೃತ್ಯುಂಜಯ ಶ್ರೀ. ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12.30 ಗಂಟೆಗೆ ಬೆಟಗೇರಿಯ ಶ್ರೀ. ಪದ್ಮಶಾಲಿ ಮಾರ್ಕಂಡೇಶ್ವರ ದೇವಸ್ಥಾನದ ಕಾರ್ಯಕ್ರಮದಲ್ಲಿ ▸▸3ನೇ ಪುಟಕ್ಕೆ

## ಹಾಲಕೆರೆ ಗ್ರಾಮ ಪಂಚಾಯಿತಿ ಕಾಂಗ್ರೆಸ್ ಮಡಿಲಿಗೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಹಾಲಕೆರೆ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ ಗಿರೀಶಗೌಡ ಮುಲ್ಕಿಪಾಟೀಲ, ಉಪಾಧ್ಯಕ್ಷರಾಗಿ ಬಾಳಪ್ಪ ತಲೇಖಾನ ಅವಿರೋಧವಾಗಿ ಆಯ್ಕೆ ಆಗಿದ್ದಾರೆ ಎಂದು ಚುನಾವಣಾ ಅಧಿಕಾರಿ ಆರ್ ಎನ್ ಜೋಷಿ ತಿಳಿಸಿದರು.

ನೂತನ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ ಮಾತನಾಡಿ, ನನ್ನನ್ನು ಅವಿರೋಧವಾಗಿ ಅಯ್ಕೆ ಮಾಡಿದ ಎಲ್ಲಾ ಸದಸ್ಯರಿಗೆ, ಕಾಂಗ್ರೆಸ್ ಪಕ್ಷದ ಮುಖಂಡರಿಗೆ ಧನ್ಯವಾದಗಳನ್ನು ತಿಳಿಸುವೆ. ಕ್ಷೇತ್ರದ ಶಾಸಕರಾದ ಜಿ ಎಸ್ ಪಾಟೀಲರ ಮಾರ್ಗದರ್ಶನದಲ್ಲಿ ಮುನ್ನಡೆದು, ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಿ, ಗ್ರಾಮದ ಎಲ್ಲಾ ಮೂಲಭೂತ ಸೌಕರ್ಯಗಳನ್ನು



ಕಟ್ಟ ಕಡೆಯ ಪ್ರಜೆಗೂ ತಲುಪುವಂತೆ ನೋಡಿಕೊಳ್ಳುತ್ತೇನೆ. ನಿಮ್ಮ ಸಲಹೆ-ಸಹಕಾರ ಮುಖ್ಯವಾಗಿದ್ದು, ನಿಮ್ಮ ನಂಬಿಕೆಗೆ ಯಾವತ್ತಿಗೂ ಚ್ಯುತಿ ಬಾರದಂತೆ ಕಾರ್ಯ ನಿರ್ವಹಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಶಿವಾನಂದ ನಂದಿ, ಆನಂದ ವಡ್ಡರ, ಬಸವರಾಜ ನರೇಗಲ್ಲ, ಅಂದಾನಗೌಡ ಪಾಟೀಲ, ಅಂದಪ್ಪ ಸಂಗಳದ, ಸಿದ್ದನಗೌಡ ಇನಾಮತಿ, ಶರಣಪ್ಪ ಕರಮಡಿ, ಅಂದೇಶಪ್ಪ ಹಳ್ಳಿ, ವೆಂಕರಡ್ಡಿ ಹಳ್ಳಿ, ಗಿರೀಶ ಹಳ್ಳಿ, ತಿಮ್ಮರಡ್ಡೆಪ್ಪ ಹೊಸಮನಿ, ಅಶೋಕ ಮಾಳಗೌಡ್ರ, ಯುವರಾಜ ಹಳ್ಳಿ, ರಾಮಪ್ಪ ಪೂಜಾರ, ರಮೇಶ ಪ್ರಭಣ್ಣವರ, ಭರಮಪ್ಪ ಕುರಿ, ರಮೇಶ ಮಡಿವಾಳರ, ರಮೇಶ ಬನ್ನಿಗಿಡದ ಮುಂತಾದವರಿದ್ದರು.

### ಮಳೆಯಿಂದ ಹಾನಿಗೊಳಗಾದ, ಪ್ರವಾಹ ಪ್ರದೇಶಗಳಿಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ -500ಕೋಟಿ ವೆಚ್ಚದಲ್ಲಿ ಬೆಣ್ಣೆಹಳ್ಳಕ್ಕೆ ಡಿಪಿಆರ್

# ಬಿದ್ದ ಮನೆಗಳನ್ನು ಎ,ಬಿ,ಸಿ ಕೆಟಗರಿ ಮಾಡಿ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಜಿಲ್ಲೆಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಮಳೆ ಹಾನಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತಿದ್ದೇನೆ. ಜುಲೈ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚಾಗಿ ಮಳೆಯಾಗಿದೆ. ರಸ್ತೆಗಳು, ಸೇತುವೆಗಳು ಹದಗೆಟ್ಟು ಹೋಗಿವೆ. ಮಳೆ ನೀರು ಜಾಸ್ತಿಯಾಗಿ ಹೊಲಗಳಲ್ಲಿ ನೀರು ನಿಂತುಕೊಂಡಿದೆ. ಎಲ್ಲ ಕಡೆಯಂತೆ ಇಂದು ಕುಂದಗೋಳ ತಾಲೂಕಿನಲ್ಲಿ ಸಮೀಕ್ಷೆ ಮಾಡಲಾಗುತ್ತಿದೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಶುಕ್ರವಾರ ಕುಂದಗೋಳ ತಾಲೂಕಿನ ಮಳೆ ಹಾನಿಗೊಳಗಾದ ಹಾಗೂ ಪ್ರವಾಹ ಪ್ರದೇಶಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.



ನವಲಗುಂದದಲ್ಲಿ ಹಲವು ರಸ್ತೆಗಳು ಹದಗೆಟ್ಟಿವೆ.

ಇಲ್ಲಿಯೂ ಕೆಲವು ಕಡೆಗಳಲ್ಲಿ ರಸ್ತೆಗಳ ಸಮಸ್ಯೆ ಉಲ್ಬಣವಾಗಿವೆ. ಕೆಲವು ಕಡೆಗಳಲ್ಲಿ ಮನೆಗಳು ಸಹ ಬಿದ್ದಿವೆ.

ಅಧಿಕಾರಿಗಳು ಖುದ್ದಾಗಿ ಮೊದಲು ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ಬಿದ್ದ ಮನೆಗಳನ್ನು ಎ.ಬಿ.ಸಿ ಕೆಟಗೆರಿ ಮಾಡಿ ಪರಿಹಾರ ಹಣ ಬಿಡುಗಡೆ ಮಾಡಲಾಗುತ್ತದೆ.



ಅಲ್ಲಾಪೂರ ಕೆರೆ ಒಡೆದಿದ್ದು, ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿದ್ದಾರೆ. ಶನಿವಾರ ಅಲ್ಲಾಪೂರ ಕೆರೆಗೆ ಖುದ್ದಾಗಿ ಭೇಟಿ ನೀಡುತ್ತೇನೆ. ▸▸3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ಶರಿರಕ್ಕೂ ಗುಣಕ್ಕೂ ವ್ಯತ್ಯಾಸವಿದೆ.
ಶರೀರ ಕ್ಷಣಿಕವಾದುದು. ಗುಣ ಶಾಶ್ವತ
–ಸುಭಾಷಿತ

## ಸಂಪಾದಕೀಯ

# 3ನೆ ಅವಧಿಗೂ ಮೋದಿ ಮಂತ್ರ

ಕರ್ನಾಟಕ ವಿಧಾನಸಭೆ ನಂತರ ಈಗ ಲೋಕಸಭೆ ಚುನಾವಣೆ ಸದ್ದು ಜೋರಾಗಿದ್ದು, ಚುನಾವಣೆಗೆ ಇನ್ನು ಒಂದು ವರ್ಷ ಇರುವಾಗಲೇ ಬಿಜೆಪಿ ಪಾಳಯದಲ್ಲಿ ಮೋದಿ ಮಂತ್ರ ಶುರುವಾಗಿದೆ.

ಹಾಗೆ ನೋಡಿದರೆ ಕಾಂಗ್ರೆಸ್ ಸಾಕಷ್ಟು ಮುಂಚಿತವಾಗಿಯೇ ಚುನಾವಣೆ ಮೇಲೆ ಕಣ್ಣಿಟ್ಟು ತಂತ್ರಗಳನ್ನು ಹೆಣೆಯುತ್ತಿದೆ. ಕಾಂಗ್ರೆಸ್ ಪ್ರಯತ್ನದಿಂದ ವಿಚಲಿತರಾದಂತೆ ಕಂಡುಬಂದಿರುವ ಪ್ರಧಾನಿ ನರೇಂದ್ರ ಮೋದಿ 2024ರ ಚುನಾವಣೆಗೆ ಪೀಠಿಕೆ ಹಾಕಿದ್ದಾರೆ.

ಭಾರತ ನನ್ನ 3ನೇ ಅವಧಿಯಲ್ಲಿ ಪ್ರಪಂಚದ ಮೂರು ಅತಿದೊಡ್ಡ ಆರ್ಥಿಕ ಶಕ್ತಿಗಳಲ್ಲಿ ಒಂದಾಗಲಿದೆ ಎನ್ನುವ ಮೂಲಕ ಹಲವಾರು ಸಂದೇಶಗಳನ್ನು ನೀಡಿದ್ದಾರೆ. ಮುಖ್ಯವಾಗಿ 3ನೆ ಅವಧಿಗೂ ನಾನೇ ಪ್ರಧಾನ ಸೇವಕ ಎನ್ನುವ ಸಂದೇಶ ರವಾನಿಸಿದ್ದಾರೆ. ವಯಸ್ಸಿನ ಕಾರಣಕ್ಕೆ 3ನೆ ಅವಧಿಗೆ ನರೇಂದ್ರ ಮೋದಿ ಪ್ರಧಾನಿ ಆಗುವುದಿಲ್ಲ ಎನ್ನುವ ಚರ್ಚೆಗೆ ಖುದ್ದು ನರೇಂದ್ರ ಮೋದಿ ಅವರೇ ತಿಲಾಂಜಲಿ ಹಾಡಿದ್ದಾರೆ. ಇತ್ತ ಬಿಜೆಪಿ ಕಾರ್ಯಕರ್ತರು, ನಾಯಕರು ಸಹ ಮತ್ತೊಂದು ಅವದಿಗೆ ನರೇಂದ್ರ ಮೋದಿ ಅವರೇ ಪ್ರಧಾನಿಯಾಗಿ ಮುಂದುವರಿಯಲಿ ಎನ್ನುವ ಇಚ್ಛೆ ಹೊಂದಿದ್ದಾರೆ. ಅಸಲಿಗೆ ನರೇಂದ್ರ ಮೋದಿ ಪ್ರಧಾನಿ ಆಗುವುದಕ್ಕಿಂತ ಅವರ ಹೆಸರಿನಲ್ಲಿ ಮತ್ತೊಂದು ಅವಧಿ ಅಧಿಕಾರ ಅನುಭವಿಸುವ ಇರಾದೆ ಹೊಂದಿದವರ ಸಂಖ್ಯೆಯೇ ಹೆಚ್ಚಾಗಿದೆ. ಇನ್ನೊಂದೆಡೆ ನರೇಂದ್ರ ಮೋದಿ ಹೆಸರಿನಲ್ಲಿ ಚುನಾವಣೆ ಎದುರಿಸಿದರೆ ಮಾತ್ರ ಅಧಿಕಾರ ಗಿಟ್ಟಿಸಿಕೊಳ್ಳಲು ಸಾಧ್ಯ ಎನ್ನುವುದನ್ನು ಬಿಜೆಪಿ ನಾಯಕರು ಮನಗಂಡಿದ್ದಾರೆ. ಸಹಜವಾಗಿ ನರೇಂದ್ರ ಮೋದಿ ಅವರ ಮಾತುಗಳಲ್ಲಿ ಅವರಲ್ಲಿ ಚೈತನ್ಯ ತುಂಬಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತದ ಆರ್ಥಿಕತೆ ಒಂದಷ್ಟು ಏರಿಕೆ ಕಂಡಿರುವುದು ನಿಜ. ಭವಿಷ್ಯದಲ್ಲಿ ಮತ್ತಷ್ಟು ಏರಿಕೆಯಾದರೂ ಅಚ್ಚರಿ ಪಡಬೇಕಿಲ್ಲ. ಆದರೆ ಅದರ ಜೊತೆಗೆ ದೇಶದಲ್ಲಿ ನಿರುದ್ಯೋಗ, ಬಡತನವೂ ನಿರ್ಮೂಲನೆಯಾಗಬೇಕು. ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ಆಚರಿಸುತ್ತಿರುವ ಹೊತ್ತಿನಲ್ಲಿ ದೇಶದಲ್ಲಿ ಮೂಲ ಸೌಕರ್ಯ ಕೊರತೆ ಕಾಡುತ್ತಿದೆ. ಕುಡಿಯುವ ನೀರು, ರಸ್ತೆ, ಚರಂಡಿ ಮತ್ತು ಒಂದು ಸೂರಿಗಾಗಿ ಬಡವರು ಅಂಗಲಾಚುವ ಪರಿಸ್ಥಿತಿ ಬಂದಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ 3ನೇ ಅವಧಿಯಲ್ಲಾದರೂ ಬಡವರ ಬದುಕು ಹಸನಾಗುವ ನಿಟ್ಟಿನಲ್ಲಿ ಕಾರ್ಯಕ್ರಮ ಮಾಡಿದ್ದರೆ ಹೆಚ್ಚು ಮತಗಳನ್ನು ಸೆಳೆಯಬಹುದಿತ್ತು. 3ನೆ ಅವಧಿಯಲ್ಲಿ ಎಲ್ಲ ಬಡವರಿಗೆ ಸೂರು ಕೊಡುವ ಭರವಸೆ ನೀಡಿದ್ದರೂ ಮತ್ತೊಮ್ಮೆ ಅಧಿಕಾರ ಸುಲಭವಾಗಿ ಅರಸಿ ಬರುತ್ತಿತ್ತು. ಆದರೂ ಇವೆಲ್ಲವನ್ನು ಬಿಟ್ಟು ಸಿರಿವಂತರ ಸಂಪತ್ತು ವೃದ್ಧಿಸುವ ಕಾರ್ಯಕ್ರಮ ಮಾಡಿ ಭಾರತವನ್ನು ಸೂಪರ್ ಪಾವರ್ ರಾಷ್ಟ್ರ ಮಾಡುವುದರಿಂದ ಬಡವರಿಗೆ ಯಾವುದೇ ಲಾಭ ಆಗುವುದಿಲ್ಲ ಎನ್ನುವುದನ್ನು ಮೋದಿ ಅರ್ಥ ಮಾಡಿಕೊಳ್ಳಬೇಕು.

## ಕವನ

### ಓ ವರುಣದೇವ ಸಾಕು ನಿಲ್ಲಿಸುವೆಯಾ ನಿನ್ನ ರುದ್ರ ನರ್ತನವ



ಓ ವರುಣದೇವ ಸಾಕು ನಿಲ್ಲಿಸುವೆಯಾ ನಿನ್ನ ರುದ್ರನರ್ತನವ
ಯಾಕೆ ಈ ಇಷ್ಟೊಂದು ಕೋಪಿಸಿಕೊಂಡಿದಿಯಾ ವರುಣದೇವ
ನೀನು ಇಷ್ಟೊಂದು ಕೋಪಿಸಿಕೊಂಡರೆ ಮುಂದೆ ಹೇಗೆ ಪರಶಿವ
ಕೋಪ ಇರಬೇಕು ನಿಜ, ಅದೇ ಕೋಪ ಅತಿ ಅಗಬಾರದು ದೇವ.

ಮಳೆಗಾಲದಲ್ಲಿ ಮಾತ್ರ ನಿನ್ನ ರುದ್ರನರ್ತನ ಆರಂಭವಾಗುತ್ತದೆ
ನೀ ನಮ್ಮ ಊರಿಗೆ ಬಂದರೆ ಸಾಕು ಒಮ್ಮೆಲೇ ಮಳೆ ಬರುತ್ತದೆ
ನೀನು ಬರುವಾಗ ದಾರಿಯಲ್ಲಿ ಸ್ವಲ್ಪ ನಿಧಾನವಾಗಿ ಬರಬೇಕು
ನೀ ಯಾವಾಗಾದರೂ ಬರುವಾಗ ಶಾಂತಿಯಿಂದ ಬಂದರೆ ಸಾಕು

ಹೊಲಗದ್ದೆಗಳಲ್ಲಿ ರೈತರ ಮುಖದಲ್ಲಿ ಸಂತಸ ಯಾವಾಗ ತರುವೆ
ಸಂಗ್ರಹಿಸಿದ ಈ ದವಸ ಧಾನ್ಯಗಳು ಹಾಳಾದರೆ ಹೇಗೆ ಗುರುವೆ
ಮೂಕ ಪ್ರಾಣಿಗಳ ರೋದನೆಯು ಕೇಳೋರು ಯಾರು ಪ್ರಭುವೆ
ಈ ಎತ್ತರದ ಬಾನಂಗಳದಲ್ಲಿ ಹಾರಾಡುವ ಪಕ್ಷಿಗಳ ಜೊತೆನಲಿವೆ

ಮುಂಜಾನೆ ಮೊದಲಿನಂತೆ ಈಗ ಸೂರ್ಯದೇವನ ದರ್ಶನವಿಲ್ಲ
ಬಾನಿನ ತುಂಬೆಲ್ಲವು ಕವಿದ ಮೋಡವು ದೂರ ಸರಿಯುತ್ತಿಲ್ಲ
ನೀನು ಸ್ವಲ್ಪ ಮರೆಯಾದರೆ ನಗುತ ಇರುವುದಿಲ್ಲ ಈ ಜಗವೆಲ್ಲ
ನೀನು ನಗು ನಗುತ ಬಂದರೆ ಸಾಕು ರೈತರಿಗೆ ಖುಷಿಯು ಬೇಕಿಲ್ಲ

ಜಡಿ ಮಳೆಯಲ್ಲಿ ಶಾಲಾ ಮಕ್ಕಳ ಮುಖದಲ್ಲಿ ನಗುವಿನ ಆಟ
ಬೀಳುವ ಮಳೆಯಲ್ಲಿ ತಂಪಿನ ನೀರಿನಲ್ಲಿ ಮಕ್ಕಳ ಕುಣಿದಾಟ
ಮಳೆ ನಿಂತ ಮೇಲೆ ಇದ್ದೆ ಇರುತ್ತದೆ ಈ ಯುವಕರ ಕೋಲಾಟ
ವರುಣದೇವ ಸಾಕು ನಿಲ್ಲಿಸುವೆಯಾ ನಿನ್ನ ಮಳೆಯ ಆರ್ಭಟ

ಈಗ ಮಾರುಕಟ್ಟೆಗಳಲ್ಲಿ ಛತ್ರಿಗಳಿಗೆ ಬಂದಿತು ಬಾರಿ ಬೇಡಿಕೆ
ಜಗದ ಜನರ ಮೇಲೆ ಇರಲಿ ವರುಣದೇವನ ಪ್ರೀತಿಯ ಹಾರೈಕೆ
ಅಲ್ಲಲ್ಲಿ ಸಣ್ಣ ಪುಟ್ಟ ತುಂಬಿ ಹರಿದವು ಈ ಹಳ್ಳ ಕೊಳ್ಳ ಕೆರೆಗಳು
ಗಾಳಿ ಮಳೆಗೆ ತುಂಬಿದವು ಸಾಲು ಸಾಲಾಗಿ ಸಾವು ನೋವುಗಳು.

**– ಸಿ ಆರ್ ಗಡಾದ, ಗದಗ.**




ಮುಳಗುಂದದ ಯಲಿಶಿರುಂದದ ಗ್ರಾಮ ಪಂಚಾಯಿತಿಗೆ 2ನೇ ಅವಧಿಗೆ ಅಧ್ಯಕ್ಷರಾಗಿ ಚಂದ್ರಶೇಖರ ಬಸವಣ್ಣೆಪ್ಪ ಕಪ್ಪತ್ತನವರ ಹಾಗೂ ಉಪಾಧ್ಯಕ್ಷರಾಗಿ ಅಲ್ಲಾಬಿ ಶರಿಫ್‌ಸಾಬ ನದಾಫ್ ಆಯ್ಕೆಯಾದರು. ಸಿ ಬಿ ದೊಡ್ಡಗೌಡರ, ಕೃಷ್ಣಗೌಡ ಪಾಟೀಲ್, ಗಂಗಯ್ಯ ಹಿರೇಮಠ, ಪಿಡಿಓ ಮಾಲತೇಶ ಬೋರಣ್ಣವರ, ಎಂ ಎಸ್ ಕಪ್ಪತ್ತನವರ ಸೇರಿದಂತೆ ಗ್ರಾಮ ಪಂಚಾಯಿತಿ ಸದಸ್ಯರು ಇದ್ದರು.

## ಇಂದು ಮೊಹರಂ ನಿಮಿತ್ತ ಲೇಖನ

# ತ್ಯಾಗ, ಬಲಿದಾನದ ಸಂಕೇತ ಮೊಹರಂ

ತ್ಯಾಗ, ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು ಉತ್ತರ ಕರ್ನಾಟಕದ ಗದಗ, ಕೊಪ್ಪಳ, ರಾಯಚೂರು, ಬಳ್ಳಾರಿ, ವಿಜಯಪುರ, ವಿಜಯನಗರ ಮುಂತಾದ ಜಿಲ್ಲೆಗಳಲ್ಲಿ ಬಹು ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಅದರಂತೆ ಇದೇ ಜುಲೈ 29, ಶನಿವಾರದಂದು ಈ ಹಬ್ಬವನ್ನು ಆಚರಿಸಲಾಗುತ್ತಿದೆ.

ಹಿಜ್ರಿ ಕ್ಯಾಲೆಂಡರ್(Hijri Calender) ಪ್ರಕಾರ, ಮೊಹರಂ ಇಸ್ಲಾಮಿಕ್ ಹೊಸ ವರ್ಷದ ಮೊದಲ ತಿಂಗಳು ಮತ್ತು ಇದನ್ನು ಪವಿತ್ರ ತಿಂಗಳು ಎಂದು ಕೂಡ ಮುಸ್ಲಿಮರು ಪರಿಗಣಿಸುತ್ತಾರೆ. ಮುಸ್ಲಿಮರಿಗೆ ರಂಜಾನ್ ಕೂಡ ಪವಿತ್ರ ತಿಂಗಳಾಗಿದ್ದು, ಈ ತಿಂಗಳಲ್ಲಿ 30 ದಿನಗಳ ಕಾಲ ಉಪವಾಸವಿದ್ದು ಆಚರಿಸುತ್ತಾರೆ. ಇಸ್ಲಾಮಿಕ್ ಕ್ಯಾಲೆಂಡರ್‌ನ ಅಂತಿಮ ದಿನದಂದು ಅಮಾವಾಸ್ಯೆಯನ್ನು ನೋಡಿದ ನಂತರ ಮೊಹರಂ ಆರಂಭವಾಗುತ್ತದೆ. ಮೊಹರಂ ಹಬ್ಬವನ್ನು 10 ದಿನಗಳ ಕಾಲ ಆಚರಿಸಲಾಗುತ್ತದೆ.

ಮೊಹರಂನ್ನು ಬಹುತೇಕ ಕಡೆ ಹಿಂದೂ ಮತ್ತು ಮುಸ್ಲಿಮರು ಸೇರಿ ಆಚರಿಸುತ್ತಾರೆ. ಕ್ರಿಸ್ತಶಕ 632ರಲ್ಲಿ ಮೊಹಮದ್ ಪೈಗಂಬರರ ನಂತರ ಶಹೀದ್ ಅಜೀಮ್ ಎಂದೇ ಪ್ರಸಿದ್ಧರಾಗಿದ್ದ ಧರ್ಮಗುರು



ಯುಜೀದ್ ಹುಸೇನರು ಇರಾಕ್‌ನ ಕರ್ಬಲಾದಲ್ಲಿ ಹುತಾತ್ಮರಾದ ದಿನವನ್ನು ಮೊಹರಂ ಆಗಿ ಆಚರಿಸಲಾಗುತ್ತಿದೆ. ಮಾನವೀಯ ಮೌಲ್ಯ ಹಾಗೂ ಸಾರ್ವಕಾಲಿಕ ಸತ್ಯಕ್ಕಾಗಿ ಮಾಡಿದ ಬಲಿದಾನದ ಮೊಹರಂ ಆಚರಣೆಗೆ ಪ್ರೇರಣೆಯಾಗಿದೆ.

**ಈ ಹಬ್ಬದ ಆಚರಣೆ ಹೇಗೆ?:**

ಅನೇಕ ಮುಸ್ಲಿಮರು ಆಶುರಾ ದಿನದಂದು ಉಪವಾಸವನ್ನು ಮಾಡುತ್ತಾರೆ, ಹಾಗೆಯೇ ಮೊಹರಂ ತಿಂಗಳಲ್ಲಿ ಕೃತಜ್ಞತೆಯನ್ನು ಸಲ್ಲಿಸುತ್ತಾರೆ. ಶಿಯಾ ಮುಸ್ಲಿಮರು ಸಹ ಶೋಕಾಚರಣೆಗಳಲ್ಲಿ ತೊಡಗುತ್ತಾರೆ. ಸಾರ್ವಜನಿಕ ಆಚರಣೆಗಳನ್ನು ಮಾಡುತ್ತಾರೆ. ಈ ವೇಳೆ ಆಲಾಯಿ ಕುಣಿತ, ಮೊಹರಂ ಪದಗಳು ಹಾಡುವುದು, ದೇವರ ಕುಣಿತ, ಬೆಂಕಿಯಲ್ಲಿ ನಡೆದಾಡುವುದು ಸೇರಿದಂತೆ ಕೆಲವು ಆಚರಣೆಯನ್ನು ಮಾಡಲಾಗುತ್ತೆ.

ಪ್ರವಾದಿ ಮೊಹಮ್ಮದ್ ಅವರ ಉಪದೇಶಗಳನ್ನು ಅವರ ಮೊಮ್ಮಕ್ಕಳು ಪಾಲನೆ ಮಾಡಿಕೊಂಡು ಬಂದಿರುತ್ತಾರೆ. ಮೊಹಮ್ಮದ್ ತಮ್ಮ ಸಿದ್ಧಾಂತ, ಧರ್ಮ ಪಾಲನೆಯ ನಿಯಮಗಳನ್ನು ವಿಶ್ವದಾದ್ಯಂತ ವಿಸ್ತರಿಸುವಂತೆ ತಿಳಿಸಿರುತ್ತಾರೆ.

ಮೊಹಮ್ಮದ್‌ರ ನಂತರ ಮಗಳು ಬೀಬಿ ಫಾತಿಮಾರ ಪತಿ ಹಜರತ್ ಅಲಿ ನಾಲ್ಕನೇ ಖಲೀಫರಾಗುತ್ತಾರೆ. ಈ ದಂಪತಿಗೆ ಇಮಾಮ್ ಹಸನ್ ಮತ್ತು ಇಮಾಮ್ ಹುಸೇನ್ ಎಂಬ ಇಬ್ಬರು ಮಕ್ಕಳಿರುತ್ತಾರೆ. ಹಜರತ್ ಅಲಿ ಅವರ ಬಳಿಕ ಖಲೀಫ್ ಸ್ಥಾನಕ್ಕೆ ಇಮಾಮ್ ಹುಸೇನ್ ಬರಬೇಕಿತ್ತು. ಆದರೆ, ಅಲ್ಲಿಯ ಸರ್ದಾರನಾಗಿದ್ದ ಯಜೀದ್ ಎಂಬಾತ ತಾನೇ ಖಲೀಫ್ ಎಂದು ಘೋಷಿಸಿಕೊಂಡಿದ್ದ. ಸರ್ವ ದುರ್ಗುಣಗಳ ಸಂಪನ್ನನಾಗಿದ್ದ ಯಜೀದ್, ಇಸ್ಲಾಂ ತತ್ವ–ಸಿದ್ಧಾಂತಗಳನ್ನು ತನಗೆ ಅನುಕೂಲವಾಗುವ ರೀತಿಯಲ್ಲಿ ಬದಲಾಯಿಸಿಕೊಳ್ಳಲು ಪ್ರಯತ್ನಿಸುತ್ತಿದ್ದ.

ಹೀಗಾಗಿ ಇಮಾಮ್ ಹುಸೇನ್ ಮತ್ತು ಇಮಾಮ್ ಹಸನ್ ಇಬ್ಬರು ಯಜೀದ್ ಆಡಳಿತವನ್ನು ವಿರೋಧಿಸಿದರು. ತನ್ನನ್ನು ವಿರೋಧಿಸಿದ ಇಮಾಮ್ ಹಸನ್ ಅವರ ಆಹಾರದಲ್ಲಿ ಯಜೀದ್ ವಿಷ ಬೆರೆಸುತ್ತಾನೆ.

ವಿಷಾಹಾರ ಸೇವಿಸಿದ ಇಮಾಮ್ ಹಸನ್ ಮೃತಪಡುತ್ತಾರೆ. ಕೊನೆಗೆ ಇಮಾಮ್ ಹುಸೇನ್‌ರನ್ನು ಸಂಧಾನಕ್ಕಾಗಿ ಯಜೀದ್ ಆಹ್ವಾನಿಸುತ್ತಾನೆ. ಯಜೀದ್ ಜೊತೆ ಸೇರದ ಇಮಾಮ್ ಹುಸೇನ್ ಇಸ್ಲಾಂ ಉಳಿಯುವಿಕೆಗಾಗಿ ಹೋರಾಟ ನಡೆಸುತ್ತಾರೆ. ಇದರಿಂದ ಕುಪಿತಗೊಂಡ ಯಜೀದ್ ಯುದ್ಧ ಸಾರುತ್ತಾನೆ. ಕೊನೆಗೆ ಇಮಾಮ್ ಹುಸೇನ್ ಯಜೀದ್ ರಾಜ್ಯವನ್ನು ತೊರೆದು ತಮ್ಮ 72 ಅನುಯಾಯಿಗಳೊಂದಿಗೆ ಮೆಕ್ಕಾ–ಮದೀನಾದತ್ತ ಪ್ರಯಾಣ ಬೆಳೆಸುತ್ತಾರೆ. ಆದರೆ ಒಂದು ವೇಳೆ ತಾವು ಮೆಕ್ಕಾಗೆ ತೆರಳಿದಾಗ ಯಜೀದ್ ನನ್ನನ್ನು ಕೊಲ್ಲಬಹುದು. ಪವಿತ್ರ ಸ್ಥಳದಲ್ಲಿ ರಕ್ತ ಹರಿಯುವುದು ಒಳಿತಲ್ಲ ಎಂದು ಅರಿತ ಇಮಾಮ್ ಹುಸೇನ್ ಅವರು ಕರಬಲಾದತ್ತ ಮಾರ್ಗ ಬದಲಿಸುತ್ತಾರೆ.

ಕರಬಲಾದದಲ್ಲಿ ಎದುರಾಗುವ ಯಜೀದ್ ಸೈನಿಕರು ನಮ್ಮ ರಾಜ ಹೇಳಿದಂತೆ ಕೇಳಿದರೆ ನಿನ್ನನ್ನು ಜೀವಂತವಾಗಿ ಬಿಡುತ್ತೇನೆ ಎಂದು ಹೇಳುತ್ತಾರೆ.

ಶತ್ರುಗಳು ಕುಡಿಯಲು ನೀರು ಕೊಡದೇ ಇದ್ದರೂ ಇಮಾಮ್ ಸೋಲನ್ನು ಒಪ್ಪಿಕೊಳ್ಳುವುದಿಲ್ಲ. ಇದರಿಂದ ಕುಪಿತಗೊಂಡ ಯಜೀದ್ ಸೈನಿಕರು ಕದನ ವಿರಾಮದಲ್ಲಿ ಇಮಾಮ್ ಹುಸೇನ್ ಡೇರಾದ ಬಳಿ ತೆರಳಿ ನಮಾಜ್ ಮಾಡುತ್ತಿದ್ದಾಗ ಶಿರಚ್ಛೇಧ ಮಾಡುತ್ತಾರೆ. ಮೊಹರಂ ತಿಂಗಳ 10ನೇ ದಿನದಂದು ಇಮಾಮ್ ಹುಸೇನ್ ವೀರಮರಣವನ್ನಪ್ಪುತ್ತಾರೆ. ಮೊಹರಂ ಆಚರಣೆ ಕಣ್ಣೀರಿನ ಹಬ್ಬವಾಗುತ್ತದೆ.



**–ಎಚ್ ಆರ್ ವಸ್ತ್ರದ,**
ಧಾರವಾಡ.

ಮೊಹರಂ ಕೇವಲ ಮುಸಲ್ಮಾನರ ಹಬ್ಬವಾಗಿರದೇ ಅದು ಸೌಹಾರ್ದಯುತ ಹಬ್ಬವಾಗಿ ಕರ್ನಾಟಕದಲ್ಲಿ ನಡೆದುಕೊಂಡು ಬಂದಿದೆ. ಅದರಲ್ಲಿಯೂ ಉತ್ತರ ಕರ್ನಾಟಕದ ಭಾಗದಲ್ಲಿ ಮೊಹರಂ ಹಬ್ಬದಲ್ಲಿ ಹಿಂದೂಗಳೇ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವುದರಿಂದಾಗಿ ಅದು ಕೇವಲ ಒಂದು ಸಮುದಾಯದ ಹಬ್ಬವಾಗಿ ಪರಿಗಣಿಸಿಲ್ಲ.

ಮೊಹರಂ ವೇಳೆ ನಾಡಿದ ಬಹುತೇಕ ಕಡೆ ಭಾವೈಕತೆ ಹಬ್ಬವಾಗಿ ಮುಸಲ್ಮಾರ ದೈವದ ಜೊತೆ ಹಿಂದೂ ದೇವರನ್ನು ಕೂಡ ಮೆರವಣಿಗೆ ಹೊರಡಿಸುವ ಪದ್ಧತಿ ಗದಗ, ರಾಯಚೂರು, ಕೊಪ್ಪಳ ಮುಂತಾದ ಜಿಲ್ಲೆಗಳಲ್ಲಿ ಇದೆ. ಅಲಾಯಿ ಕುಣಿತ ಈ ಹಬ್ಬದ ಪ್ರಮುಖ ಆಚರಣೆಯಾಗಿದ್ದು, ಜನಪದ ನೃತ್ಯಗಳು ಈ ಹಬ್ಬದ ಆಚರಣೆಯ ಮೆರುಗನ್ನು ಹೆಚ್ಚಿಸುತ್ತದೆ.

### ಮೊಹರಂ ಆಚರಣೆಯ ಹಿನ್ನೆಲೆ

ಮೊಹರಂನ 10ನೇ ದಿನವನ್ನು ಅಶುರಾ(Ashura) ಎಂದು ಕರೆಯುತ್ತಾರೆ. ಇದು ಮುಸ್ಲಿಮರಿಗೆ ಮಹತ್ವದ ದಿನವಾಗಿದೆ. ಸುನ್ನಿ ಮತ್ತು ಶಿಯಾ ಮುಸ್ಲಿಮರು ಮೊಹರಂ ಅನ್ನು ವಿಭಿನ್ನವಾಗಿ ಆಚರಿಸುತ್ತಾರೆ. ಅನೇಕ ಸುನ್ನಿ ಮುಸ್ಲಿಮರಿಗೆ, ಈ ತಿಂಗಳು ಇಸ್ಲಾಮಿಕ್‌ನ ಹೊಸ ವರ್ಷದ ಆರಂಭವಾಗಿದೆ. ಆದರೆ ಇಸ್ಲಾಂನ ಶಿಯಾವನ್ನು ಅನುಸರಿಸುವ ಮುಸ್ಲಿಮರಿಗೆ, ಈ ತಿಂಗಳು ಇಸ್ಲಾಮಿಕ್ ಇತಿಹಾಸದಲ್ಲಿ ದುಃಖದ, ಪಶ್ಚಾತ್ತಾಪದ ದಿನವಾಗಿದೆ.

## ಇಂದು 'ಅಂತಾರಾಷ್ಟ್ರೀಯ ಹುಲಿಗಳ ದಿನ'ದ ನಿಮಿತ್ತ ವಿಶೇಷ ಲೇಖನ

# ವ್ಯಾಘ್ರ ಸಂತತಿ–ಕಾಳಜಿವಹಿಸಿ, ಸಂರಕ್ಷಿಸಿ

ಹುಲಿಗಳ ವಾಸಸ್ಥಾನಗಳನ್ನು ರಕ್ಷಿಸಲು, ವಿಸ್ತರಿಸಲು ಹಾಗೂ ಸಂರಕ್ಷಣೆಯ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸುವುದು, ರಾಷ್ಟ್ರವು ತನ್ನ ಪ್ರಾಣಿಗಳನ್ನು ಹೇಗೆ ಪರಿಗಣಿಸುತ್ತದೆ ಎಂಬುದನ್ನು ನೋಡುವ ಮೂಲಕ ಅದರ ಹಿರಿಮೆ ಮತ್ತು ನೈತಿಕ ಪ್ರಗತಿಯನ್ನು ಅಳೆಯಲು ಪ್ರತಿ ವರ್ಷ ವಿಶ್ವದಾದ್ಯಂತ ಜುಲೈ 29ರಂದು 'ವಿಶ್ವ ಹುಲಿ ದಿನ'ವನ್ನು ಆಚರಿಸಲಾಗುತ್ತದೆ. ಅಪಾಯದಂಚಿನಲ್ಲಿರುವ ಹುಲಿಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಮತ್ತು ಹುಲಿ ಸಂರಕ್ಷಣೆಯನ್ನು ಉತ್ತೇಜಿಸುವುದು ಈ ಆಚರಣೆಯ ಹಿಂದಿನ ಪ್ರಮುಖ ಉದ್ದೇಶವಾಗಿದೆ.

ಹುಲಿ ನಮ್ಮ ರಾಷ್ಟ್ರೀಯ ಪ್ರಾಣಿ. ಇದು ಪರಿಸರ ವ್ಯವಸ್ಥೆಯ ಆರೋಗ್ಯ ಮತ್ತು ವೈವಿಧ್ಯತೆಯನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಒಂದು ಹುಲಿ 13 ಅಡಿ ಉದ್ದ 300 ಕೆಜಿವರೆಗೂ ತೂಗುತ್ತದೆ. ಸಿಂಹದಂತೆ ಇದು ಗುಂಪಿನಲ್ಲಿ ಇರುವ ಪ್ರಾಣಿಯಲ್ಲ. ಒಂಟಿಯಾಗಿ ಇರಲು ಬಯಸುವ ಬುದ್ಧಿವಂತ ಜೀವಿ. ಭಾರತದ




ಮಟ್ಟಿಗೆ ಬಂಗಾಳದ ಹುಲಿಗಳಿಗೆ ಹೆಚ್ಚಿನ ಮಹತ್ವವಿದೆ. ವಿಶ್ವದಲ್ಲಿ ಇರುವ ಶೇ.70ರಷ್ಟು ಹುಲಿಗಳು ಭಾರತದಲ್ಲೇ ಇವೆ.

ಬಿಳಿ ಹುಲಿ, ಕಪ್ಪು ಪಟ್ಟೆಗಳೊಂದಿಗೆ ಕಂದು ಹುಲಿ, ಕಪ್ಪು ಪಟ್ಟೆಗಳೊಂದಿಗೆ ಬಿಳಿ ಹುಲಿ, ಮತ್ತು ಚಿನ್ನದ ಬಣ್ಣದ ಅಥವಾ ಗೋಲ್ಡನ್ ಹುಲಿ ಹೀಗೆ ನಾನಾ ಬಣ್ಣಗಳ ಹುಲಿಗಳಿವೆ. ಹುಲಿಯಲ್ಲಿ ಮಾತ್ರ ಕಂಡುಬರುವ ವಿಶಿಷ್ಟವಾದ ಗುಣಗಳೆಂದರೆ– ಹುಲಿ ಕೇವಲ ಮಾಂಸಾಹಾರಿ, ಹುಲಿ ಒಂಟಿಯಾಗಿ ಬೇಟೆಯಾಡುತ್ತದೆ, ಹುಲಿಗಳಿಗೆ ನೀರು ಎಂದರೆ ಇಷ್ಟ. ಹುಲಿಯ ಘರ್ಜನೆ ಮೂರು ಕಿ.ಮೀ ವರೆಗೆ ಕೇಳಬಹುದು. ಭಾರೀ ತೂಕ ಹೊಂದಿದ್ದರೂ ತೀವ್ರವೇಗ ಪಡೆಯಬಲ್ಲವು. ಇಪ್ಪತ್ತು ಲಕ್ಷ ವರ್ಷದಿಂದಲೂ ಹುಲಿಗಳು ಈ ಭೂಮಿ ಮೇಲಿವೆ. ಎರಡು ಹುಲಿಗಳು ಒಂದೇ ತರಹ ಇರುವುದಿಲ್ಲ.

ಜಗತ್ತಿನ 13 ದೇಶಗಳಲ್ಲಿ ಮಾತ್ರ ಹುಲಿ ಸಂತತಿ ಕಂಡು ಬರುತ್ತದೆ. ಪ್ರಸ್ತುತ ಜಾಗತಿಕವಾಗಿ ಅಸ್ತಿತ್ವದಲ್ಲಿರುವ 6 ಜಾತಿಯ ಹುಲಿಗಳಲ್ಲಿ ರಾಯಲ್ ಬೆಂಗಾಲ್ ಹುಲಿ, ದಕ್ಷಿಣ ಚೀನಾ ಹುಲಿ, ಇಂಡೋಚೈನೀಸ್ ಹುಲಿ, ಸುಮಾತ್ರಾ ಹುಲಿ, ಸೈಬೀರಿಯನ್ ಹುಲಿ ಮತ್ತು ಮಲಯಾನ ಹುಲಿ ಪ್ರಬೇಧಗಳು ಮಾತ್ರ ಕಂಡುಬರುತ್ತವೆ. ಇಲ್ಲಿಯವರೆಗೆ ಬಾಲಿ ಟೈಗರ್, ಕ್ಯಾಸ್ಪಿಯನ್ ಟೈಗರ್, ಜವಾನ್ ಟೈಗರ್, ಮತ್ತು ಟೈಗರ್ ಹೈಬ್ರಿಡ್ಸ್ ಸೇರಿದಂತೆ ನಾಲ್ಕು ಜಾತಿಯ ಹುಲಿಗಳು ಅಳಿದುಹೋಗಿವೆ.

ಭಾರತದ ಹುಲಿಗಳ ಸಂಖ್ಯೆಯ ಬೆಳವಣಿಗೆಯ ದರಕ್ಕೆ ಅನುಗುಣವಾಗಿ ಮಧ್ಯಪ್ರದೇಶವು ಅತಿ ಹೆಚ್ಚು ಅಂದರೆ 526 ಹುಲಿಗಳನ್ನು ಹೊಂದಿದೆ. ದ್ವಿತೀಯ ಸ್ಥಾನ ಪಡೆದ ಕರ್ನಾಟಕದಲ್ಲಿ 524 ಹುಲಿಗಳಿವೆ ಹಾಗೂ ಉತ್ತರಾಖಂಡವು 442 ಹುಲಿಗಳೊಂದಿಗೆ 3 ನೇ ಸ್ಥಾನದಲ್ಲಿದೆ. ಭಾರತವು 2022ರ ಗುರಿಗಿಂತ ಮೊದಲೇ ಈಗಾಗಲೇ ಹುಲಿಗಳ ಸಂಖ್ಯೆಯನ್ನು ದ್ವಿಗುಣಗೊಳಿಸಿದೆ. ಈ ಹಿನ್ನೆಲೆಯಲ್ಲಿ ನಮ್ಮ ದೇಶಕ್ಕೆ ಮತ್ತು ಕರ್ನಾಟಕ ರಾಜ್ಯಕ್ಕೆ ಇದು ಹೆಮ್ಮೆಯ ವಿಚಾರ.



ಕರ್ನಾಟಕದಲ್ಲಿ 5 ಹುಲಿ ಸಂರಕ್ಷಿತ ಪ್ರದೇಶಗಳಿವೆ. ಬಂಡೀಪುರ, ನಾಗರಹೊಳೆ, ಭದ್ರಾ, ದಾಂಡೇಲಿ–ಅಣಶಿ ಹಾಗೂ ಬಿಳಿಗಿರಿರಂಗನ ಬೆಟ್ಟದ (ಬಿಆರ್‌ಟಿ) ಹುಲಿ ಸಂರಕ್ಷಿತ ಪ್ರದೇಶಗಳು. ಅದೇ ರೀತಿ ಭಾರತದಲ್ಲಿ 50 ಹುಲಿ ಸಂರಕ್ಷಿತ ಅಭಯಾರಣ್ಯಗಳಿವೆ. ಒಟ್ಟಾರೆಯಾಗಿ ಹುಲಿಯು ಅಗ್ರ ಪರಭಕ್ಷಕ ಮತ್ತು ಆಹಾರ ಸರಪಳಿಯ ತುದಿಯಲ್ಲಿರುತ್ತದೆ. ಕಾಡಿನ ಸಸ್ತನಿ ಪ್ರಾಣಿಗಳ ಸಂಖ್ಯೆಯನ್ನು ನಿಯಂತ್ರಣದಲ್ಲಿಡಲು ಹುಲಿಗಳು ಕೊಡುಗೆ ನೀಡುತ್ತವೆ. ಏಕೆಂದರೆ ಬೇಟೆಯಾಡುವ ಸಸ್ಯಹಾರಿಗಳ ಸಮತೋಲನ ಮತ್ತು ಅವು ಆಹಾರ ನೀಡುವ ಸಸ್ಯವರ್ಗವನ್ನು ಕಾಪಾಡಿಕೊಳ್ಳುತ್ತವೆ. ಹುಲಿ ಸಂರಕ್ಷಣೆಯಲ್ಲಿ ಆಸಕ್ತಿ ತೋರುವ ರಾಷ್ಟ್ರಗಳಿಗೆ ಅಗತ್ಯ ತರಬೇತಿ, ಮಾರ್ಗದರ್ಶನ ನೀಡಲು ಭಾರತ ಸಿದ್ಧವಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಕಾರಣ, ಭಾರತದಲ್ಲಿ ಹುಲಿಗಳ ರಕ್ಷಣೆಗೆ ಹಾಕಿಕೊಂಡ ಸಂರಕ್ಷಣೆಯ ಮಾರ್ಗೋಪಾಯಗಳು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳೇ ಇದಕ್ಕೆ ಸಾಕ್ಷಿ.



**– ಬಸವರಾಜ ಎಮ್ ಯರಗುಪ್ಪಿ.**
ಬಿಆರ್‌ಪಿ ಶಿರಹಟ್ಟಿ,
ಲಕ್ಷ್ಮೇಶ್ವರ.

# ಹುಲ್ಲೂರ ಗ್ರಾ ಪಂ ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಹುಲ್ಲೂರ ಗ್ರಾಮ ಪಂಚಾಯಿತಿಯ 2ನೇ ಅವಧಿಯ ಅಧ್ಯಕ್ಷರಾಗಿ ಲೀಲಾ ಶಿವಪ್ಪ ತಳವಾರ ಮತ್ತು ಉಪಾಧ್ಯಕ್ಷರಾಗಿ ವೀಣಾ ಈರಪ್ಪ ಅಕ್ಕಿ ಅವಿರೋಧವಾಗಿ ಆಯ್ಕೆಯಾದರು.

ಒಟ್ಟು 9 ಸದಸ್ಯರನ್ನೊಳಗೊಂಡ ಗ್ರಾ ಪಂಗೆ ಅಧ್ಯಕ್ಷ ಸ್ಥಾನ ಎಸ್‌ಟಿ ಮಹಿಳೆ, ಉಪಾಧ್ಯಕ್ಷ ಸ್ಥಾನ ಬ ವರ್ಗಕ್ಕೆ ಮೀಸಲಾಗಿತ್ತು. ಗುರುವಾರ ನಡೆದ



ಚುನಾವಣೆಯಲ್ಲಿ ಅಧ್ಯಕ್ಷ–ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಚುನಾವಣಾಧಿಕಾರಿ ಬಿ ಎಸ್ ಭಜಂತ್ರಿ ಅವಿರೋಧ ಆಯ್ಕೆ ಘೋಷಿಸಿದರು. ಈ ವೇಳೆ ಸದಸ್ಯರಾದ ಪರಮೇಶಗೌಡ ಪಾಟೀಲ, ಶಿವಣ್ಣ ಬಸಾಪುರ, ದೇವೇಂದ್ರಪ್ಪ ಲಮಾಣಿ, ಯಲ್ಲಪ್ಪ ನರಸೋಜಿ, ಮರಿಯವ್ವ ಹರಿಜನ, ಕವಿತಾ ಭಕ್ಷಿ, ಶಾರವ್ವ ಪಾಟೀಲ, ಪಿಡಿಓ ಶೇಖರಗೌಡ ವಡಕನಗೌಡ್ರ ಇದ್ದರು.

# ಭವಿಷ್ಯನಿಧಿಯ ಪ್ರಯೋಜನ ಪಡೆಯಿರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಭವಿಷ್ಯನಿಧಿ ಮಾಡಿಸುವುದರಿಂದ ಕಷ್ಟಕಾಲದಲ್ಲಿ ಉಪಯೋಗಕ್ಕೆ ಬರುತ್ತದೆ. ಹಾಗೆಯೇ ಮುಂದೆ ನಿವೃತ್ತಿ ಕಾಲದಲ್ಲಿ ಅದರ ಪ್ರಯೋಜನ ಸಿಗುವುದು ಎಂದು ಡಾ. ಪ್ರಕಾಶ ಸಂಕನೂರ ಹೇಳಿದರು.

ನಗರದ ಸಂಕನೂರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾದ 'ಭವಿಷ್ಯನಿಧಿ ನಿಮ್ಮ ಬಾಗಿಲಿಗೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹುಬ್ಬಳ್ಳಿಯಿಂದ ಆಗಮಿಸಿದ ಕಾರ್ಮಿಕ ಇಲಾಖೆ ಅಧಿಕಾರಿಗಳಾದ ವೀರಣ್ಣ ಕುಬಸದ, ಭವಿಷ್ಯನಿಧಿ ಮಾಡಿಸುವುದರಿಂದ ಸಿಗುವ




ಸೌಲಭ್ಯಗಳ ಕುರಿತು ತರಬೇತಿ ನೀಡಿ, ಇದರ ಸವಲತ್ತುಗಳನ್ನು ಪಡೆದುಕೊಳ್ಳಲು ಕರೆ ನೀಡಿದರು. ಭವಿಷ್ಯನಿಧಿಯನ್ನು ಯಾವುದೇ ಕಂಪನಿ ಅಥವಾ ಇನ್ನಿತರ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರು ಕನಿಷ್ಠ 10 ಜನ ಇದ್ದರೂ ಭವಿಷ್ಯನಿಧಿಗೆ ಅರ್ಹರಾಗುತ್ತಾರೆ ಎಂದರು. ಇಲಾಖೆಯ ಇನ್ಫೋರ್ವ ಅಧಿಕಾರಿ ಜಾಧವ, ಇಎಸ್‌ಐಸಿ ಹಾಗೂ ಭವಿಷ್ಯನಿಧಿಯಿಂದ ಸಿಗುವ ಎಲ್ಲ ಸೌಲಭ್ಯಗಳ ಕುರಿತು ಸಂಕ್ಷಿಪ್ತವಾಗಿ ತಿಳಿಸಿದರು. ಕಾರ್ಯಕ್ರಮವನ್ನು ರಶ್ಮಿ ವಿನ್ಸೆಂಟ್ ಪಾಟೀಲ ನಿರೂಪಿಸಿದರು. ಶ್ವೇತಾ ಸಂಕನೂರ, ನರ್ಸಿಂಗ್ ಸಂಸ್ಥೆಯ ಆಡಳಿತಾಧಿಕಾರಿ ವಿನ್ಸೆಂಟ್ ಪಾಟೀಲ ಹಾಗೂ ಸಂಕನೂರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ, ಬಾಬಾ ಸ್ಪೆಶಾಲಿಟಿ ಆಸ್ಪತ್ರೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಗೃಹಲಕ್ಷ್ಮೀ ಯೋಜನೆಯ ಸದುಪಯೋಗ ಪಡೆದುಕೊಳ್ಳಿ

**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಮನೆಯ ಯಜಮಾನಿ ಸ್ವಾವಲಂಬಿ ಜೀವನ ಸಾಗಿಸಲು ರಾಜ್ಯ ಕಾಂಗ್ರೆಸ್ ಸರ್ಕಾರ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೊಳಿಸಿದ್ದು, ಅರ್ಹರೆಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಶಾಸಕಿ ಎಂ ಪಿ ಲತಾ ಮಲ್ಲಿಕಾರ್ಜುನ ಹೇಳಿದರು.

ಪಟ್ಟಣದ ಸಾಮರ್ಥ್ಯ ಸೌಧದಲ್ಲಿ ಇತ್ತೀಚೆಗೆ ರಾಜ್ಯ ಸರ್ಕಾರದ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸಮಾಜದಲ್ಲಿ ಮಹಿಳೆಗೆ ಗೌರವಯುತ ಸ್ಥಾನ ದೊರಕುವ ಹಿತದೃಷ್ಟಿಯಿಂದ ರಾಜ್ಯ ಕಾಂಗ್ರೆಸ್ ಸರ್ಕಾರ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತಂದಿದೆ. ಮನೆಯ ಯಜಮಾನಿ ಸಣ್ಣ ಪುಟ್ಟ ಖರ್ಚುಗಳಿಗೆ ಗಂಡಸರ ಮುಂದೆ ಕೈಚಾಚುವುದನ್ನು ತಪ್ಪಿಸಲು ಪ್ರತಿ ತಿಂಗಳು 2 ಸಾವಿರ ರೂ ಹಣವನ್ನು ಆಗಸ್ಟ್ 16ರಂದು ಬ್ಯಾಂಕ್ ಖಾತೆಗೆ ಜಮಾ ಮಾಡಲಿದೆ ಎಂದರು.

ಪುರಸಭೆ ಮುಖ್ಯಾಧಿಕಾರಿ ಶಿವಕುಮಾರ ಎರಗುಡಿ ಮಾತನಾಡಿ, ಯೋಜನೆಯ ಕುರಿತು ಸಮಗ್ರ



ಮಾಹಿತಿ ನೀಡಿದರು.

ಪುರಸಭೆ ಸದಸ್ಯರಾದ ಎಂ ವಿ ಅಂಜಿನಪ್ಪ, ಭೀಮವ್ವ ಸಣ್ಣ ಹಾಲಪ್ಪ, ಲಾಟಿ ದಾದಪೀರ್, ಡಿ ಅಬ್ದುಲ್ ರೆಹೆಮಾನಸಾಬ್, ಮುಖಂಡರಾದ ವೈ ಕೆ ಬಿ ದುರುಗಪ್ಪ, ಹುಲಿಕಟ್ಟಿ ಚಂದ್ರಪ್ಪ, ಚಿಕ್ಕೇರಿ ಬಸಪ್ಪ, ಗುಡಿ ನಾಗರಾಜ, ಸಣ್ಣ ಹಾಲಪ್ಪ, ಎಲ್ ಮಂಜ್ಯಾನಾಯ್ಕ್, ಶಂಕರ, ತಹಸೀಲ್ದಾರ ಡಾ.ಶಿವಕುಮಾರ ಬಿರದಾರ, ಇಓ ಕೆ ಪ್ರಕಾಶ ಹಾಗೂ ಇತರರು ಪಾಲ್ಗೊಂಡಿದ್ದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಪತ್ರಿಕಾ ದಿನಾಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಹೋಬಳಿಯ ವತಿಯಿಂದ ಪತ್ರಿಕಾ ದಿನಾಚರಣೆಯು ಶನಿವಾರ ಬೆಳಿಗ್ಗೆ 10.30ಕ್ಕೆ ನರೇಗಲ್ಲದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜರುಗಲಿದೆ ಎಂದು ಹೋಬಳಿ ಘಟಕದ ಅಧ್ಯಕ್ಷ ಈಶ್ವರ ಬೆಟಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಹಾಲೆಕೆರೆಯ ಜ. ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದು, ಸಮ್ಮುಖವನ್ನು ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ವಹಿಸಲಿದ್ದಾರೆ. ರೋಣ ಶಾಸಕ ಜಿ ಎಸ್ ಪಾಟೀಲ ಸಮಾರಂಭವನ್ನು ಉದ್ಘಾಟಿಸಲಿದ್ದು, ಡಿವಿಜಿಯವರ ಭಾವಚಿತ್ರಕ್ಕೆ ವಿಧಾನಪರಿಷತ್ ಸದಸ್ಯ ಎಸ್ ವಿ ಸಂಕನೂರ ಪುಷ್ಪಾರ್ಪಣೆ ಮಾಡಲಿದ್ದಾರೆ. ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಎಚ್ ಎಂ ಶರೀಫನವರ, ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ಕಾಂಗ್ರೆಸ್ ಪಕ್ಷದ ಯುವ ಧುರೀಣ ಅಕ್ಷಯ ಪಾಟೀಲ, ಎಸ್‌ಎವಿವಿಪಿ ಸಮಿತಿಯ ಆಡಳಿತಾಧಿಕಾರಿ ಎನ್ ಆರ್ ಗೌಡರ, ಪದವಿ ಪ್ರಾಚಾರ್ಯ ಎಸ್ ಜಿ ಕೇಶಣ್ಣವರ, ಪ.ಪೂ. ಪ್ರಾಚಾರ್ಯ ವೈ ಸಿ ಪಾಟೀಲ, ನಾಗರಿಕ ಹಿತರಕ್ಷಣಾ ಸಮಿತಿ ನರೇಗಲ್ಲದ ಮುಖ್ಯಸ್ಥ ಜಗದೀಶ ಸಂಕನಗೌಡ್ರ, ಶಹರ ಘಟಕದ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಎಸ್‌ಎವಿವಿಪಿ ಸಮಿತಿ ಸದಸ್ಯ ನಿಂಗನಗೌಡ ಲಕ್ಕನಗೌಡ್ರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ನಿವೃತ್ತ ಶಿಕ್ಷಕ ಎಂ ಎಸ್ ದಢೇಸೂರಮಠ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ ಪತ್ರಕರ್ತ, ವಿತರಕ ಸಂಗಮೇಶ ಮೆಣಸಗಿಯವರ ಮಗಳು ಕೀರ್ತಿ ಮೆಣಸಗಿಯವರಿಗೆ ಸನ್ಮಾನ ಸಮಾರಂಭ ಜರುಗಲಿದೆ.

**ಕಾಯ್ದೆ ಉಲ್ಲಂಘನೆಯ ವಿರುದ್ಧ 36 ಪ್ರಕರಣ, 4900 ರೂ. ದಂಡ ಸಂಗ್ರಹ**

# ಜಿಲ್ಲೆಯ ಶಿಕ್ಷಣ ಸಂಸ್ಥೆಗಳ ಸುತ್ತ ಕೋಟ್ಪಾ ದಾಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಜುಲೈ ತಿಂಗಳಲ್ಲಿ ಗದಗ ಎನ್‌ಟಿಸಿಪಿಯ ಜಿಲ್ಲಾ ಸಮೀಕ್ಷಣಾಧಿಕಾರಿಗಳು ಹಾಗೂ ಕಾರ್ಯಕ್ರಮಾಧಿಕಾರಿಗಳಾದ ಡಾ.ವೆಂಕಟೇಶ್ ರಾಥೋಡ್ ಇವರ ಮಾರ್ಗದರ್ಶನದಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶ ಗದಗ ವತಿಯಿಂದ ತಾಲೂಕಾ ತಂಬಾಕು ನಿಯಂತ್ರಣ ತನಿಖಾ ದಳ ಗದಗ ಹಾಗೂ ರೋಣ ಸಹಯೋಗದಲ್ಲಿ ಗದಗ ನಗರದ ಕೆ ಸಿ ರಾಣಿ ರೋಡ್, ಮುಳಗುಂದ ಪಟ್ಟಣ ಹಾಗೂ ರೋಣ ತಾಲೂಕಿನ ನರೆಗಲ್ ಪಟ್ಟಣದಲ್ಲಿ ಕೋಟ್ಪಾ ದಾಳಿ ಹಮ್ಮಿಕೊಂಡು ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಹಾಗೂ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ–2003ರ ಕುರಿತು ಸಾರ್ವಜನಿಕರಲ್ಲಿ ಹಾಗೂ ಅಂಗಡಿಕಾರರಲ್ಲಿ ಜಾಗೃತಿ ಮೂಡಿಸಲಾಯಿತು.

ತಂಬಾಕು ಕುರಿತ ಜಾಹೀರಾತು ನಿಷೇಧಿಸುವದು, 18 ವರ್ಷದೊಳಗಿನವರಿಗೆ ತಂಬಾಕು ಮಾರಾಟ ನಿಷೇಧಿಸುವದು, ತಂಬಾಕು ಉತ್ಪನ್ನಗಳ ಪ್ಯಾಕ್ ಮೇಲೆ ಶೇ.85ರಷ್ಟು ದೊಡ್ಡದಾಗಿ ಆರೋಗ್ಯ ಎಚ್ಚರಿಕೆ ಚಿಹ್ನೆ ಕಡ್ಡಾಯ. ಈ ಕುರಿತು ಮಾಹಿತಿ ಹಾಗೂ ಜಾಗೃತಿ ಮೂಡಿಸಿ ಉಲ್ಲಂಘನೆ ಮಾಡಿದವರಿಗೆ ಎಚ್ಚರಿಕೆ ನೀಡಿ, ಒಟ್ಟು 36 ಪ್ರಕರಣ ದಾಖಲಿಸಿ ರೂ. 4900 ದಂಡ ಸಂಗ್ರಹಿಸಲಾಯಿತು.

ಈ ದಾಳಿಗಳಲ್ಲಿ ಡಾ. ಅನ್ವರ್ ಹುಸೇನ್ ಸಾಮುದ್ರಿ, ಡಾ.ಪ್ರವೀಣ ತುಪ್ಪದ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಿಲ್ಲಾ ಸಲಹೆಗಾರರಾದ ಗೋಪಾಲ ಸುರಪುರ, ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ಪಟ್ಟಣ ಪಂಚಾಯಿತಿಯ ಎಸ್ ಟಿ ಚವ್ಹಾಣ, ಕೆ ಎಂ ಜಮಾಲಸಾಬ, ಬಿ ಸಿ ಮೋಕಾಸಿ, ರಾಮಚಂದ್ರಪ್ಪಾ ಕಜ್ಜಿ, ಪೊಲೀಸ್ ಇಲಾಖೆಯ ಬಿ ಎಂ ಕುರ್ತಕೋಟಿ, ವಿ ವಿ ಚೇಗರೆಡ್ಡಿ, ಎಸ್ ಬಿ ಸವಡಿ, ಕಡತೋಡ, ಆರೋಗ್ಯ ಇಲಾಖೆಯ ಪಿ ಸಿ ಹಲಗೇರಿ, ರೊಹಾನ, ಖಾದರ್, ರವಿ ಗಾಣಿಗೇರ, ಶಿವಾನಂದ ಉಪಸ್ಥಿತರಿದ್ದರು.






ಬಸ್ ನಿಲ್ದಾಣ, ಹೋಟೇಲ್, ಬಾರ್ & ರೆಸ್ಟೋರೆಂಟ್ ಮುಂತಾದ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ನಾಮಫಲಕ ಬಿತ್ತರಿಸುವದು ಆ ಸ್ಥಳದ ಮಾಲೀಕರ ಜಾವಾಬ್ದಾರಿಯಾಗಿರುತ್ತದೆ. ಶಾಲಾ–ಕಾಲೇಜು ಆವರಣದಿಂದ 100 ಗಜದವರೆಗೆ ತಂಬಾಕು ಬಳಕೆ, ಮಾರಾಟ ನಿಷೇಧಿಸಲಾಗಿದ್ದು, ಉಲ್ಲಂಘನೆಯಾದಲ್ಲಿ ಅಂಥವರ ವಿರುದ್ಧ ಕಠಿಣ ಕ್ರಮ ವಹಿಸಿ ಆ ಅಂಗಡಿಗಳ ಪರವಾನಗಿ ರದ್ದು ಮಾಡಲಾಗುವದು.

# ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ ಇಂದು

▶▶ಮೊದಲನೇ ಪುಟದಿಂದ

ಭಾಗವಹಿಸುವರು. ಸಂಜೆ 5.30 ರಿಂದ 7.30 ಗಂಟೆಯವರೆಗೆ ನಗರದ ಕಾಟನ್ ಸೇಲ್ ಸೊಸೈಯಟಿ ಆವರಣದಲ್ಲಿರುವ ಸಚಿವರ ಕಾರ್ಯಾಲದಯಲ್ಲಿ ಸಾರ್ವಜನಿಕರ ಭೇಟಿ ನಡೆಸಿ ವಾಸ್ತವ್ಯ ಮಾಡುವರು.

ಜುಲೈ 31 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಅಂಬೇಡ್ಕರ ಭವನದಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಶೈಕ್ಷಣಿಕ ಸಮ್ಮೇಳನದಲ್ಲಿ ಪಾಲ್ಗೊಂಡು ಮಧ್ಯಾಹ್ನ 12 ಗಂಟೆಗೆ ಮುಂಡರಗಿ ತಾಲೂಕು ಪಂಚಾಯತ ಸಭಾಭವನದಲ್ಲಿ ಜನತಾ ದರ್ಶನ, ಸಾರ್ವಜನಿಕ ಭೇಟಿ ನಡೆಸುವರು. ನಂತರ ಮಧ್ಯಾಹ್ನ 1 ಗಂಟೆಗೆ ಮುಂಡರಗಿ ತಾಲೂಕು ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 2 ಗಂಟೆಗೆ ಸಿಂಗಟಾಲೂರು ಶ್ರೀ. ವೀರಭದ್ರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆಯುವರು. ನಂತರ ಹುಬ್ಬಳ್ಳಿಗೆ ತೆರಳಿ ಅಲ್ಲಿಂದ ರಾತ್ರಿ 9.40ಕ್ಕೆ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಮೂವರಿಂದ ರೈತನ ಹಣ ಕಳ್ಳತನ; ಸಿಸಿ ಕ್ಯಾಮೆರಾದಲ್ಲಿ ದೃಶ್ಯ ಸೆರೆ

▶▶ಮೊದಲನೇ ಪುಟದಿಂದ

ತಂಡ ಶಿವಮೊಗ್ಗ, ಹಾನಗಲ್, ಹುಬ್ಬಳ್ಳಿ, ಗದಗದಿಂದ ಬರುವ ಕಳ್ಳರು ಬಸ್ ನಿಲ್ದಾಣ, ಆಭರಣದ ಅಂಗಡಿ, ಸಂತೆ ಗದ್ದಲದಲ್ಲಿ ಆಭರಣ, ಹಣ, ಮೊಬೈಲ್ ಇತರೆ ಬೆಲೆ ಬಾಳುವ ವಸ್ತುಗಳನ್ನು ಅಪಹರಿಸಿಕೊಂಡು ಪರಾರಿಯಾಗುತ್ತಿದ್ದಾರೆ. ಈ ಬಗ್ಗೆ ಆಗಾಗ್ಗೆ ಪೊಲೀಸರು ಕೆಲವರನ್ನು ಹಿಡಿದು ಬಿಸಿಮುಟ್ಟಿಸುವ ಕಾರ್ಯ ಮಾಡುತ್ತಿದ್ದಾರಾದರೂ ಈ ಬಗ್ಗೆ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಬೇಕು. ಇಲ್ಲದಿದ್ದರೆ ಅದೇಷ್ಟೋ ಅಮಾಯಕರು ಸಂಕಷ್ಟಕ್ಕೆ ಸಿಲುಕುತ್ತಾರೆ ಎಂದು ಸಾರ್ವಜನಕರು ಒತ್ತಾಯಿಸಿದ್ದಾರೆ.

# ನಾಳೆ ಅಭಿನಂದನಾ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಕುವೆಂಪು ವಿಶ್ವ ವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪುರಸ್ಕಾರ ಪಡೆದ ಡಾ.ರಾಜಗುರು ಗುರುಸ್ವಾಮಿ ಕಲಿಕೇರಿ ಅವರಿಗೆ ಅಭಿನಂದನಾ ಸಮಾರಂಭ ಜು. 30 ರಂದು ರವಿವಾರ ಮುಂಜಾನೆ 11–30 ಗಂಟೆಗೆ ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ನಡೆಯಲಿದೆ.

ಅಡವೀಂದ್ರಸ್ವಾಮಿ ಮಠ, ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿಯ ಸಹಯೋಗದಲ್ಲಿ ನಡೆಯುವ ಕಾರ್ಯಕ್ರಮದ ಸಮ್ಮುಖವನ್ನು ಶ್ರೀಮಠದ ಧರ್ಮದರ್ಶಿ ಮಹೇಶ್ವರಸ್ವಾಮೀಜಿ ಹೊಸಳ್ಳಿಮಠ ವಹಿಸುವರು. ಮೋಹನ ಗ್ವಾರಿ ಅಧ್ಯಕ್ಷತೆ ವಹಿಸುವರು.

ಶಿವಲಿಂಗಯ್ಯಶಾಸ್ತ್ರಿ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡುವರು.

ಅತಿಥಿಗಳಾಗಿ ಶಾಂತಾಬಾಯಿ ಬಾಕಳೆ, ವ್ಹಿ.ಎಂ. ಕುಂದರಗಾಳ ಹಿರೇಮಠ ಆಗಮಿಸುವರು ಎಂದು ವಿನಾಯಕ ಸಜ್ಜನ ತಿಳಿಸಿದ್ದಾರೆ.

# ಬಿದ್ದ ಮನೆಗಳನ್ನು ಎ,ಬಿ,ಸಿ ಕೆಟಗೆರಿ ಮಾಡಿ ಪರಿಹಾರ

▶▶ಮೊದಲನೇ ಪುಟದಿಂದ

ನನ್ನ ಜೊತೆ ಮಾಧ್ಯಮದವರು ಸಹಕಾರ ನೀಡಬೇಕು ಎಂದು ಮನವಿ ಮಾಡಿಕೊಂಡರು.

ಬೆಣ್ಣೆಹಳ್ಳಕ್ಕೆ ಡಿಪಿಆರ್ ಮಾಡಲಾಗುತ್ತಿದೆ. ಸುಮಾರು ರೂ. 500 ಕೋಟಿ ವೆಚ್ಚ ಆಗಬಹುದು ಎಂದು ಅಂದಾಜಿಸಲಾಗಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ಟೆ–ಂಡರ್ ಆದ ಯೋಜನೆಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಲಾಗುತ್ತಿದೆ. ಇಲಾಖಾವಾರು ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು.

**ಮಳೆಯಿಂದ ಹಾನಿಗೊಳಗಾದ ಮನೆಗೆ ಭೇಟಿ**

ಶೆರೆವಾಡ ಗ್ರಾಮದಲ್ಲಿ ಮಳೆಯಿಂದ ಹಾನಿಗೊಳಗಾದ ಹನುಮಂತಪ್ಪ ಮತ್ತಿಗಟ್ಟಿಯವರ ಮನೆಗೆ ಸಚಿವ ಸಂತೋಷ ಲಾಡ, ಭೇಟಿ ನೀಡಿ ಮನೆ ಹಾನಿ ವೀಕ್ಷಿಸಿದರು. ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

**ಹನುಮಂತಪ್ಪ ಕೊಪ್ಪದ ಮೂರ್ತಿಗೆ ಮಾಲಾರ್ಪಣೆ**

ಜುಲೈ 26 ರಂದು ಕಾರ್ಗಿಲ್ ವಿಜಯ ದಿವಸ ಅಂಗವಾಗಿ ಬೆಟದೂರಿನ ಹುತಾತ್ಮ ವೀರ ಯೋಧ ಹನುಮಂತಪ್ಪ ಕೊಪ್ಪದ ಅವರ ಮೂರ್ತಿಗೆ ಸಚಿವರು ಮಾಲಾರ್ಪಣೆ ಮಾಡಿದರು.

**ಅತಿವೃಷ್ಟಿ ಹೊಲಗಳಿಗೆ ಭೇಟಿ ನೀಡಿದ ಸಚಿವರು**

ಬೆಟದೂರಿನ ಸಮೀಪದ ಫಕ್ಕೀರಪ್ಪ ಅವರ ಹೊಲಕ್ಕೆ ಭೇಟಿ ನೀಡಿ ಕೃಷಿ ಇಲಾಖೆಯ ಅಧಿಕಾರಿ ಭಾರತಿ ಮೆಣಸಿನಕಾಯಿ ಅವರಿಂದ ಮಾಹಿತಿ ಪಡೆದುಕೊಂಡರು. ಸರಿಯಾದ ರೀತಿಯಲ್ಲಿ ಕೃಷಿ ಬೆಳೆಗಳ ಕುರಿತು ವರದಿ ಮಾಡಬೇಕು. ಅನಗತ್ಯ ಮಾಹಿತಿ ನೀಡಬೇಡಿ ಎಂದು ತಿಳಿಸಿದರು.

**ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಲು ಕ್ರಮ ವಹಿಸಿ**

ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಕುಂದಗೋಳ ತಾಲೂಕಿನ ಮಳೆ ಹಾನಿಗೊಳಗಾದ ಮತ್ತು ಪ್ರವಾಹ ಪ್ರದೇಶಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಶರೇವಾಡದಲ್ಲಿ ಶಾಲಾ ಮಕ್ಕಳನ್ನು ಭೇಟಿ ಮಾಡಿದರು.

ಕುಂದಗೋಳದಿಂದ ಬರುವ ಬಸ್ ಗಳು ತುಂಬಿಕೊಂಡು ಬರುತ್ತವೆ. ಬೆಳಿಗ್ಗೆ ಮತ್ತು ಸಂಜೆ ಶಾಲೆಗೆ ತೆರಳಲು ಹಾಗೂ ಮರಳಿ ಬರಲು ಹೆಚ್ಚಿನ ಬಸ್ ವ್ಯವಸ್ಥೆ ಮಾಡಬೇಕು ಎಂದು ಶಾಸಕರಾದ ಎಂ.ಆರ್.ಪಾಟೀಲ ಮತ್ತು ಶಾಲಾ ಮಕ್ಕಳು ಮನವಿ ಮಾಡಿಕೊಂಡರು.

ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಸಾರಿಗೆ ಇಲಾಖೆಯ ಅಧಿಕಾರಿಗಳು ಹೆಚ್ಚಿನ ಬಸ್ ವ್ಯವಸ್ಥೆ ಕಲ್ಪಿಸಲಿದ್ದಾರೆ ಎಂದು ಭರವಸೆ ನೀಡಿದರು.

ಶಾಸಕರಾದ ಎಂ.ಆರ್.ಪಾಟೀಲ, ಜಿಲ್ಲಾಧಿಕಾರಿ ಗುರುದತ ಹೆಗಡೆ, ಉಪವಿಭಾಗಾಧಿಕಾರಿ ಅಶೋಕ ತೇಲಿ, ಕುಂದಗೋಳ ತಹಸೀಲ್ದಾರ್ ಶೈಲೇಶ ಪರಮಾನಂದ, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಹೇಶ ಕುರಿಯವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇತರರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ರಾಜಕೀಯ ಪ್ರಜ್ಞೆಯ ಅಗತ್ಯವಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಕ್ಕಳಲ್ಲಿ ರಾಜಕೀಯ ಪ್ರಜ್ಞೆಯನ್ನು ಪ್ರೌಢಶಾಲಾ ಹಂತದಲ್ಲಿಯೇ ಬೆಳೆಸಿದರೆ, ಅವರು ಮುಂದಿನ ಉತ್ತಮ ನಾಯಕರಾಗಬಲ್ಲರು ಎಂದು ಎಸ್ ಎ ಪದವಿ ಕಾಲೇಜಿನ ಪ್ರಾಚಾರ್ಯ ಎಸ್ ಜಿ ಕೇಶಣ್ಣವರ ಹೇಳಿದರು.

ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ 2023–24ನೇ ಸಾಲಿನ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಶಾಲಾ ಸಂಸತ್ ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸಲು ಸಹಕಾರಿಯಾಗುತ್ತದೆ ಎಂದರು.

ಶಾಲಾ ಸಂಸತ್‌ನ್ನು ವೀರಣ್ಣ ಹಳ್ಳಿ ಉದ್ಘಾಟಿಸಿದರು. ಸಂಸ್ಥೆಯ ಆಡಳಿತಾಧಿಕಾರಿ ಎನ್ ಆರ್ ಗೌಡರ ಮಾತನಾಡಿ, ಪಠ್ಯ ಕಲಿಕೆಗೆ ಪಠ್ಯೇತರ ಚಟುವಟಿಕೆಗಳು ಪೂರಕವಾಗುತ್ತವೆ. ಹೀಗಾಗಿ, ಆಟ–ಸಾಂಸ್ಕೃತಿಕ ಕಾರ್ಯಕ್ರಮಗಳು ಇಂದಿನ ದಿನಮಾನದಲ್ಲಿ ಬಹಳ ಅವಶ್ಯವೆಂದು ನುಡಿದರು. ಶಾಲೆಯ ಮುಖ್ಯೋಪಾಧ್ಯಾಯ ಎಸ್ ಎನ್ ಹೂಲಗೇರಿ ಸ್ವಾಗತಿಸಿದರು. ಎ ಟಿ ಮಳ್ಳಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಆಡಳಿತ ಮಂಡಳಿ ಸದಸ್ಯರಾದ ನಿಂಗನಗೌಡ ಲಕ್ಕನಗೌಡರ, ಷಣ್ಮುಖಪ್ಪ ಶಿದ್ನೆಕೊಪ್ಪ, ಸಮಿತಿ ಸದಸ್ಯ ಮಲ್ಲಿಕಾರ್ಜುನಪ್ಪ ಮೆಣಸಗಿ, ಶಿಕ್ಷಕರಾದ ಬಿ ಡಿ ಯರಗೊಪ್ಪ, ಎಂ ಎಸ್ ಅತ್ತಾರ, ಕೆ ಸಿ ಜೋಗಿ, ಎಸ್ ಶಿವಮೂರ್ತಿ, ಎಸ್ ಎಫ್ ಧರ್ಮಾಯತ, ಆರ್ ಎಂ ಗುಳಬಾಳ ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರಾದ ಗೌರಿ, ಗಾಯತ್ರಿ, ಪ್ರಿಯಾ ನಿರ್ವಹಿಸಿದರು.



# ಮಹಿಳಾ ಸಮ್ಮಾನ್ ಉಳಿತಾಯ ಯೋಜನೆ ಯಶಸ್ಸಿಗೆ ಶ್ರಮಿಸಿ

▶▶ಮೊದಲನೇ ಪುಟದಿಂದ

ಗ್ರಾಮದಲ್ಲಿ–164, ಫುಟಗಾವ್ ಬಡ್ನಿ ಗ್ರಾಮದಲ್ಲಿ–147, ಬಟ್ಟೂರ್ ಗ್ರಾಮದಲ್ಲಿ–102 ಹಾಗೂ ಮುಳಗುಂದ ಉಪ ಅಂಚೆ ಕಚೇರಿ ವ್ಯಾಪ್ತಿಯ ನೀಲಗುಂದ ಗ್ರಾಮದಲ್ಲಿ–100 ಹೊಸ ಖಾತೆಗಳನ್ನು ತೆರೆದು ಅಲ್ಲಿನ ಶಾಖಾ ಅಂಚೆ ಪಾಲಕರು ಸಂಪೂರ್ಣ ಮಹಿಳಾ ಸಮ್ಮಾನ ಉಳಿತಾಯ ಗ್ರಾಮಗಳನ್ನಾಗಿ ಘೋಷಿಸಲು ಸಹಕರಿಸಿದ್ದಾರೆ ಎಂದು ತಿಳಿಸಿ, ಅವರನ್ನು ಅಭಿನಂದಿಸಿ ಸನ್ಮಾನಿಸಲಾಯಿತು. ಹೊಸ ಖಾತೆಗಳನ್ನು ತೆರೆದು ಹಣವನ್ನು ತೊಡಗಿಸಿದ ಮಹಿಳೆಯರಿಗೆ ಪಾಸ್ ಪುಸ್ತಕಗಳನ್ನು ವಿತರಿಸಲಾಯಿತು.

ಪ್ರಾಸ್ತಾವಿಕವಾಗಿ ಮಾತನಾಡಿದ ಗದಗ ಅಂಚೆ ಉಪ ವಿಭಾಗದ ಸಹಾಯಕ ಅಧೀಕ್ಷಕ ಶ್ರೀಕಾಂತ್ ಜಾಧವ್, ಮಹಿಳಾ ಸಮ್ಮಾನ್ ಉಳಿತಾಯ ಯೋಜನೆಯು ಅತ್ಯುತ್ತಮವಾದ ಯೋಜನೆಯಾಗಿದ್ದು, ಉತ್ತಮ ಬಡ್ಡಿ ದರವನ್ನು ಕೂಡ ಹೊಂದಿದೆ. ಎಲ್ಲಾ ಮಹಿಳೆಯರು ಈ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳಲು ವಿನಂತಿಸಿ, ಸಂಪೂರ್ಣ ಗ್ರಾಮಗಳನ್ನಾಗಿ ಘೋಷಣೆ ಮಾಡಲು ಸಹಕರಿಸಿದ ಎಲ್ಲಾ ಸಿಬ್ಬಂದಿಗಳನ್ನು ಅಭಿನಂದಿಸಿದರು. ಲಕ್ಷ್ಮೇಶ್ವರ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹಿಳಾ ಸಬಲೀಕರಣಕ್ಕೆ ಈ ಉಳಿತಾಯ ಯೋಜನೆಯು ಅತ್ಯುತ್ತಮವಾಗಿದೆ. ಪ್ರತಿಯೊಬ್ಬ ಮಹಿಳೆಯೂ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು. ವನಜಾಕ್ಷಿ ಬ್ಯಾಲಹುಣಸಿ ಪ್ರಾರ್ಥಿಸಿದರು. ಅಂಚೆ ಮೇಲ್ವಿಚಾರಕ ಶರಣಯ್ಯ ಹಿರೇಮಠ್ ನಿರೂಪಿಸಿ, ವಂದಿಸಿದರು.

# ದೊಡ್ಡೂರ ಗ್ರಾಮ ಪಂಚಾಯತಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ದೊಡ್ಡೂರ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಮಲ್ಲಪ್ಪ ಯಲ್ಲಪ್ಪ ತೋಟದ ಉಪಾಧ್ಯಕ್ಷರಾಗಿ ಲಕ್ಷ್ಮೀ ಈರಣ್ಣ ಅಂಗಡಿ ಆಯ್ಕೆಯಾದರು.

ಒಟ್ಟು 15 ಸದಸ್ಯರನ್ನೊಳಗೊಂಡ ಗ್ರಾಪಂನ ಅಧ್ಯಕ್ಷ ಸ್ಥಾನ ಸಾಮಾನ್ಯ, ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿತ್ತು.

ಶುಕ್ರವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಲ್ಲಪ್ಪ ತೋಟದ, ಚಂದ್ರಶೇಖರ ಈಳಗೇರ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಲಕ್ಷ್ಮೀ ಅಂಗಡಿ, ದೇವಕ್ಕ ಭಜಕ್ಕನವರ ನಾಮಪತ್ರ ಸಲ್ಲಿಸಿದ್ದರು. ಮತದಾನ ಪ್ರಕ್ರಿಯೆಯಲ್ಲಿ ಇಬ್ಬರು ಸದಸ್ಯರು ಗೈರಾಗಿದ್ದರಿಂದ 7 ಸದಸ್ಯರ ಬಲದಿಂದ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ ನಡೆಯಿತು. ಬಿ.ಎಸ್ ಭಜಂತ್ರಿ ಚುನಾವಣಾಧಿಕಾರಿಯಾಗಿದ್ದರು. ಈ ವೇಳೆ ಸದಸ್ಯರಾದ ನಾನಪ್ಪ ಲಮಾಣಿ, ನಿಂಗಪ್ಪ ಬಂಕಾಪುರ, ಫಕ್ಕೀರಗೌಡ್ರ ಭರಮಗೌಡ್ರ, ಲಕ್ಷ್ಮೀ ಅಂಗಡಿ, ನೀಲವ್ವ ಕಟಗಿ, ಸುಶೀಲವ್ವ ಲಮಾಣಿ, ಸಕ್ರಪ್ಪ ಲಮಾಣಿ, ಮಾಂತೇಶ ಲಮಾಣಿ, ಸಾಕವ್ವ ಲಮಾಣಿ, ಜಯಮ್ಮ ಮಣ್ಣಮ್ಮನವರ, ದೇವಕ್ಕ ಭಜಕ್ಕನವರ ಇಂದ್ರವ್ವ ಲಮಾಣಿ, ಮಾಲವ್ವ ಈಳಗೇರ ಸೇರಿ ಹಲವರಿದ್ದರು.



# ಮಣಿಪುರ ಹಿಂಸಾಚಾರ: ಬಿಎಸ್‌ಪಿ ಜಿಲ್ಲಾ ಘಟಕ ಖಂಡನೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಬಹುಜನ ಸಮಾಜ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ಕುಕ್ಕಿ ಜನಾಂಗದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ಅತ್ಯಾಚಾವೆಸಗಿದನ್ನು ಖಂಡಿಸಿ ಶುಕ್ರವಾರ ತಹಸೀಲ್ದಾರರ ಮುಖಾಂತರ ರಾಷ್ಟ್ರಪತಿಯವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಬಹುಜನ ಸಮಾಜ ಪಾರ್ಟಿ ಸಂಯೋಜಕ ಬಸವರಾಜ ನವಲಗುಂದ ಮಾತನಾಡಿ, ಮಣಿಪುರದಲ್ಲಿ ಮೇ 4ರಂದು ಕುಕ್ಕಿ ಜನಾಂಗದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ನಡುಬೀದಿಯಲ್ಲಿ ಮೆರವಣಿಗೆ ಮಾಡಿ, ಚಿತ್ರಹಿಂಸೆ ನೀಡುತ್ತಾ ಅವರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ ಘಟನೆಯು ಇಡೀ ದೇಶವೇ ತಲೆತಗ್ಗಿಸುವಂತಹ ಅಮಾನುಷ ಕೃತ್ಯವಾಗಿದೆ. ಈ ದೌರ್ಜನ್ಯವನ್ನು ತಡೆಗಟ್ಟಲು ಪ್ರಯತ್ನಿಸಿದ ಸಂತ್ರಸ್ಥೆ ಮಹಿಳೆಯ ತಮ್ಮನನ್ನು ಈ ಕಿರಾತಕರು ಹತ್ಯೆ ಮಾಡಿರುವುದಾಗಿ ವರದಿಯಾಗಿದೆ. ಈ ದೌರ್ಜನ್ಯವನ್ನು ಕರ್ನಾಟಕ ಬಹುಜನ ಸಮಾಜ ಪಾರ್ಟಿ ತೀವ್ರವಾಗಿ ಖಂಡಿಸುತ್ತದೆ ಎಂದರು. ಪಕ್ಷದ ಅಧ್ಯಕ್ಷ ದೇವೇಂದ್ರಪ್ಪ ಕಟ್ಟಿಮನಿ ಮಾತನಾಡಿ, ಮಣಿಪುರ ರಾಜ್ಯದ ಗುಡ್ಡಗಾಡು ಪ್ರದೇಶದಲ್ಲಿ ವಾಸಮಾಡುವ ಸಮುದಾಯಗಳ ಮಧ್ಯೆ ಹಲವು ದಿನಗಳಂದಲೂ ಜನಾಂಗೀಯ ಘರ್ಷಣೆ ಉಂಟಾಗಿ ಮಕ್ಕಳು, ಮಹಿಳೆಯರು, ವೃದ್ಧರಾದಿಯಾಗಿ ಹಲವಾರು ಜನ ಬಲಿಯಾಗಿದ್ದಾರೆ. ಕುಕ್ಕಿ ಸಮುದಾಯದ ನೂರಾರ ಮನೆಗಳನ್ನು, ಚರ್ಚುಗಳನ್ನು ಸುಟ್ಟುಹಾಕಿ, ಧ್ವಂಸ ಮಾಡಿದವರ ವಿರುದ್ಧ ಕಾನೂನು ರೀತಿಯಲ್ಲಿ ಕ್ರಮ ಜರುಗಿಸಬೇಕು. ಮಣಿಪುರದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಿರೆನ್ ಸಿಂಗ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಿ ಎಚ್ ದೊಡ್ಡಮನಿ ಉಪಸ್ಥಿತರಿದ್ದರು.



**ನವೀಕರಣಗೊಂಡ ಸಿಆರ್‌ಸಿ ಕೇಂದ್ರದ ಉದ್ಘಾಟನೆ ಕಾರ್ಯಕ್ರಮದಲ್ಲಿ ಶಾಸಕ ಡಾ.ಚಂದ್ರು ಲಮಾಣಿ**

# ಸರಕಾರದ ಸೌಕರ್ಯಗಳು ಸದ್ವಿನಿಯೋಗವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರಗಳು ಶಿಕ್ಷಣಕ್ಕಾಗಿ ಅನೇಕ ಪೂರಕ ಯೋಜನೆ, ಸೌಲಭ್ಯ, ಸೌಕರ್ಯಗಳನ್ನು ಕಲ್ಪಿಸುತ್ತಾ ಬರುತ್ತವೆ. ಅವುಗಳ ಸಮರ್ಪಕ ಅನುಷ್ಠಾನ ಮತ್ತು ನೀಡಿದ ಸೌಕರ್ಯಗಳ ಸದ್ವಿನಿಯೋಗ, ಸಂರಕ್ಷಣೆಯ ಮನೋಭಾವ ಶಿಕ್ಷಕರದ್ದಾಗಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಗುರುವಾರ ತಾಲೂಕಿನ ದೊಡ್ಡೂರಿನಲ್ಲಿನ ಸಿಆರ್‌ಸಿ ಕಟ್ಟಡವನ್ನು ಶಿಕ್ಷಕರೇ ಸ್ವಂತ ಸಹಾಯ–ಸಹಕಾರದಿಂದ ನವೀಕರಣಗೊಳಿಸಿರುವ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿ, ಶೈಕ್ಷಣಿಕ ಮಟ್ಟ ಸುಧಾರಣೆ, ಶಿಕ್ಷಕರ ಜ್ಞಾನ ಹೆಚ್ಚಳ, ಇಲಾಖೆ ಕಾರ್ಯಕ್ರಮ, ತರಬೇತಿ, ಸಮಾಲೋಚನೆ, ಕಾರ್ಯಾಗಾರ ಸೇರಿ ಶಿಕ್ಷಣದ ಪ್ರಗತಿಗೆ ಪೂರಕವಾದ ಕಾರ್ಯ ಚಟುವಟಿಕಗಳನ್ನು ಕೈಗೊಳ್ಳಲು ಸಿಆರ್‌ಸಿ ಕಟ್ಟಡಗಳು ಅಗತ್ಯ. ಈ ಉದ್ದೇಶದಿಂದ ಸ್ಥಾಪಿಸಲಾದ ಸಮೂಹ ಸಂಪನ್ಮೂಲ ಕೇಂದ್ರದ ಕಟ್ಟಡಗಳು ಹಾಳಾಗುತ್ತಿರುವುದನ್ನು ಮನಗಂಡ ಶಿಕ್ಷಕರು ತಮ್ಮ ಸ್ವಂತ ಖರ್ಚಿನಿಂದ ದುರಸ್ಥಿಗೊಳಿಸಿರುವುದು ಶ್ಲಾಘನೀಯ. ಇದು ಶಿಕ್ಷಕರಿಗೆ ತಮ್ಮ ಇಲಾಖೆಯ ಮೇಲಿರುವ ಆತ್ಮಾಭಿಮಾನ, ಕಾಳಜಿ ಮತ್ತು ಶಿಕ್ಷಣದ ಮೇಲಿರುವ ಪ್ರೀತಿಗೆ ಕಾರಣವಾಗಿದೆ. ಶಿಕ್ಷಕರ ಈ ಕಾರ್ಯ ಮಾದರಿಯಾಗಿದೆ ಮತ್ತು ನನ್ನ ಕ್ಷೇತ್ರದ ಶಿಕ್ಷಕ ಕಾರ್ಯ ನನಗೆ ಹೆಮ್ಮೆ ತಂದಿದೆ ಎಂದರು.

ಬಳಿಕ ನಡೆದ ದೊಡ್ಡೂರ ಕ್ಲಸ್ಟರ್‌ನ ಮುಖ್ಯಶಿಕ್ಷಕರ ಕಾರ್ಯಾಗಾರದಲ್ಲಿ ಸಿಆರ್‌ಪಿ ಜಿ.ಎಚ್ ರಾಜೂರ ಮತ್ತು ಬಿಆರ್‌ಪಿ ಬಸವರಾಜ ಎಂ ಯರಗುಪ್ಪಿ ಅವರು ಶಿಕ್ಷಣ ಇಲಾಖೆಯಲ್ಲಿನ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ನಡೆಯುವ ಕಾರ್ಯಚಟುವಟಿಕೆಗಳು ಮತ್ತು ಮುಖ್ಯ ಗುರುಗಳು ತಮ್ಮ ಶಾಲೆಯಲ್ಲಿ ನಿರ್ವಹಿಸುವ ಜವಾಬ್ದಾರಿಗಳ ಕುರಿತು ಹೇಳಿದರು.

ಈ ವೇಳೆ ದೈಹಿಕ ಶಿಕ್ಷಣ ಪರಿವೀಕ್ಷಕ ಎಂ.ಎಂ ಹವಳದ, ಎಸ್‌ಡಿಎಂಸಿ ಅಧ್ಯಕ್ಷ ಹಾಲನಗೌಡ ಪಾಟೀಲ, ಉಮೇಶ ಡೊಳ್ಳಿನ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್ ಹರ್ಲಾಪೂರ, ಚಂದ್ರಕಾಂತ ನೇಕಾರ, ಎಲ್. ಎನ್ ನಂದೆಣ್ಣವರ, ಗೀತಾ ಹಳ್ಯಾಳ. ಮುಖ್ಯ ಶಿಕ್ಷಕಿ ಎನ್.ವಿ ಕುಲಕರ್ಣಿ, ಎಂ.ಎಸ್ ಹಿರೇಮಠ, ಎಂ.ಎನ್ ಭರಮಗೌಡರ ಮತ್ತು ಸಿಆರ್‌ಪಿ ಜಿ.ಎಚ್ ರಾಜೂರ, ಆರ್ ಮಹಾಂತೇಶ, ಸತೀಶ ಬೋಮಲೆ, ಎಲ್.ಎಫ್ ಮಠದ, ತಿರಕಪ್ಪ ಪೂಜಾರ, ಎಸ್.ಎನ್ ಪಶುಪತಿಹಾಳ, ಎನ್.ಎ ಮುಲ್ಲಾ, ಗ್ರಾಮದ ಎನ್.ಎಚ್ ಹಡಪದ, ಶಂಕ್ರಪ್ಪ ಲಮಾಣಿ, ಗಣೇಶ ಲಮಾಣಿ, ಪುಟ್ಟಪ್ಪ ಲಮಾಣಿ ಮತ್ತು ಮಕ್ಕಳಿದ್ದರು. ಜಿ.ಆರ್ ಪಾಟೀಲ, ಉಮೇಶ ನೇಕಾರ, ಗಿರೀಶ ನೇಕಾರ ನಿರೂಪಿಸಿದರು.



ಶಾಲೆಯನ್ನೇ ದೇವಾಲಯವೆಂದು, ಮಕ್ಕಳನ್ನೇ ದೇವರೆಂದು ಪೂಜ್ಯನೀಯ ಭಾವನೆಯಿಂದ ಶಿಕ್ಷಣ ಸೇವೆ ಮಾಡುವ ಶಿಕ್ಷಕರು ತಮ್ಮ ಒಂದು ಸಲಹೆಯನ್ನು ಅತ್ಯಂತ ಆಸಕ್ತಿಯಿಂದ ಸ್ವೀಕರಿಸಿ ಕ್ಷೇತ್ರವ್ಯಾಪ್ತಿಯಲ್ಲಿ ಶಿಥಿಲಗೊಳ್ಳುತ್ತಿರುವ ಸಿಆರ್‌ಸಿ ಕಟ್ಟಡಗಳನ್ನು ಕಾಳಜಿಯಿಂದ ಅಭಿವೃದ್ಧಿಗೊಳಿಸುವ ಮೂಲಕ ಇಲಾಖೆಯ ಅಳಿಲು ಸೇವೆ ಮಾಡಿರುವುದು ಖುಷಿ ತಂದಿದೆ.

**–ಜಿ.ಎಂ ಮುಂದಿನಮನಿ, ಬಿಇಓ**

# ಉಡುಪಿ ಕಾಲೇಜಿನ ಘಟನೆ ಖಂಡನೀಯ: ಅನಿಲ ಅಬ್ಬಿಗೇರಿ

■ವಿಜಯಸಾಕ್ಷಿ ಸುದ್ದಿ, ಗದಗ

ಉಡುಪಿಯ ಕಾಲೇಜೊಂದರಲ್ಲಿ ವಿದ್ಯಾರ್ಥಿನಿಯ ಅಶ್ಲೀಲ ವಿಡಿಯೋ ಚಿತ್ರೀಕರಣ ಮಾಡಿ, ಅದನ್ನು ಇತರರಿಗೆ ಕಳುಹಿಸಿದ ವಿದ್ಯಾರ್ಥಿನಿಯರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಭಾರತೀಯ ಜನತಾ ಪಾರ್ಟಿ ಗದಗ ನಗರ ಮಂಡಲಾಧ್ಯಕ್ಷ ಅನಿಲ ಅಬ್ಬಿಗೇರಿ ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ರವರು ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿ ನೀಡಿರುವ ಅವರು, ಪ್ರಕರಣದ ವಿವರವಾದ ತನಿಖೆ ಮಾಡಬೇಕು. ಆ ಮೂವರು ವಿದ್ಯಾರ್ಥಿನಿಯರನ್ನು ಕೂಡಲೇ ಬಂಧಿಸಿ, ಅಶ್ಲೀಲ ವಿಡಿಯೋ ಹಂಚಿದ ಜಾಲವನ್ನು ಬಯಲಿಗೆ ಎಳೆಯಬೇಕು. ಅಪರಾಧದಲ್ಲಿ ತೊಡಗಿದ ವಿದ್ಯಾರ್ಥಿನೀಯರ ವಿರುದ್ಧ ತ್ವರಿತಗತಿಯಲ್ಲಿ ಕಾನೂನು ಕ್ರಮ ಕೈಗೊಂಡು, ನ್ಯಾಯಾಂಗ ತನಿಖೆಗೆ ಒಳಪಡಿಸಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮವನ್ನು ತೆಗೆದುಕೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.




# ಆಗಸ್ಟ್ 14ರಂದು ಗುರುವಂದನಾ ಸಮಾರಂಭ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

1972ನೇ ಸಾಲಿನಲ್ಲಿ ನರೇಗಲ್ಲದ ಶ್ರೀ ಅನ್ನದಾನ ವಿಜಯ ಬಾಲಕರ ಪ್ರೌಢಶಾಲೆಯಲ್ಲಿ ಎಸ್ ಎಸ್‌ಎಲ್‌ಸಿ ಪಸಾದ ವಿದ್ಯಾರ್ಥಿಗಳು ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ ಸೇವಾ ನಿವೃತ್ತಿಯನ್ನು ಹೊಂದಿದ್ದಾರೆ. ಅವರೆಲ್ಲರೂ ಸೇರಿ ಆಗಸ್ಟ್ 14ರಂದು ಅಂದಿನ ಶಿಕ್ಷಕ-ಸಿಬ್ಬಂದಿಗೆ ಗುರುವಂದನೆ ಮತ್ತು ಶಿಕ್ಷಕೇತರ ಸಿಬ್ಬಂದಿಯವರಿಗೆ ಅಭಿನಂದನೆ, ಹಳೆಯ ಗೆಳೆಯರ ಪುನರ್ಮಿಲನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಈ ಕುರಿತು ಅಭಿನಂದನಾ ಸಮಿತಿಯ ಪ್ರಚಾರ ಸಮಿತಿ ಅಧ್ಯಕ್ಷ ಬಸವರಾಜ ದಿಂಡೂರ ಮತ್ತು ಗುರುವಂದನಾ ಸಮಿತಿಯ ಗೌರವ ಕಾರ್ಯದರ್ಶಿ ಅಶೋಕ ಕುಲಕರ್ಣಿ ಪತ್ರಿಕಾ ಹೇಳಿಕೆ ನೀಡಿ,

ಇದಕ್ಕೆ ಪೂರಕವಾಗಿ ಜುಲೈ 10ರಂದು ಪೂರ್ವಭಾವಿ ಸಭೆ ಕರೆಯಲಾಗಿತ್ತು. ನಂತರ, ಪ.ಪೂ. ಶ್ರೀ ಮುಪ್ಪಿನ



ಬಸವಲಿಂಗ ಮಹಾಸ್ವಾಮಿಗಳವರ ಮಾರ್ಗದರ್ಶನದಂತೆ ಅಂದೇ ಶಾಲೆಯ ಸುತ್ತಲೂ ಸಸಿಗಳನ್ನು ನೆಟ್ಟು ವನಮಹೋತ್ಸವ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಂಡು ಎಲ್ಲರೂ ಮುದಗೊಂಡಿದ್ದೇವೆ.

ಶ್ರೀಗಳ ಮಾರ್ಗದರ್ಶನದಂತೆ ನಮಗೆ ಕಲಿಸಿದ ಗುರುಗಳಿಗೆ ಅಭಿನಂದನೆ, ಅಂದಿನ ದಿನಗಳಲ್ಲಿ ಶಾಲಾ ಕಚೇರಿಯಲ್ಲಿ ಕಾರ್ಯ ನಿರ್ವಹಿಸಿದ ಸಿಬ್ಬಂದಿಗೆ ಅಭಿನಂದನೆ ಮತ್ತು ಅಂದು ಕಲಿತ ಗೆಳೆಯರೆಲ್ಲರ ಪುನರ್ಮಿಲನ ಸಮಾರಂಭವನ್ನು ಇದೇ ಆಗಸ್ಟ್ 14ರ ಸೋಮವಾರದಂದು ನೆರವೇರಿಸುತ್ತಿದ್ದೇವೆ.

ನಾವು ಈ ನಿರ್ಧಾರದ ನಂತರ ಕಾರ್ಯವನ್ನು ಪ್ರಾರಂಭಿಸಿದಾಗ ಕೇವಲ 15-20 ಜನ ಗೆಳೆಯರು ಮಾತ್ರ ನಮ್ಮ ಗುಂಪಿನಲ್ಲಿದ್ದರು. ಈಗ ಆ ಸಂಖ್ಯೆ 60ನ್ನು ಮೀರಿದೆ. ನಮ್ಮ ಆಗಿನ ಉಳಿದ ಗೆಳೆಯರ ಸಂಪರ್ಕ ನಮಗೆ ಸಿಗುತ್ತಿಲ್ಲ. ಈ ಪ್ರಕಟಣೆಯನ್ನು ಕಂಡು ಅಂದಿನ ಯಾರೇ ಗೆಳೆಯರು ನಮ್ಮನ್ನು ಸಂಪರ್ಕಿಸಿದರೆ ನಮಗೆ ಅತೀವ ಸಂತೋಷವಾಗುತ್ತದೆ. ಅವರೂ ಸಹ ತಪ್ಪದೇ ಅಂದಿನ ಸಮಾರಂಭದಲ್ಲಿ ಪಾಲ್ಗೊಂಡು ತಮ್ಮ ಹಿಂದಿನ ದಿನಗಳನ್ನು ಮೆಲಕು ಹಾಕಬಹುದು ಎಂದು ತಿಳಿಸಿದ್ದು, ಹೆಚ್ಚಿನ ಸಂಪರ್ಕಕ್ಕಾಗಿ ಬಸವರಾಜ ದಿಂಡೂರ-ಮೊ.9611632378 ಅಥವಾ ಅಶೋಕ ಕುಲಕರ್ಣಿ-ಮೊ.9663800327ನ್ನು ಸಂಪರ್ಕಿಸುವಂತೆ ಕೋರಿದ್ದಾರೆ.

ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಸಚಿವ ಸಂತೋಷ ಲಾಡ್

# ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯ ನಿರ್ವಹಿಸಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ತಾಲೂಕಿನಲ್ಲಿ ಹಲವಾರು ಸಮಸ್ಯೆಗಳಿವೆ. ಸಮಸ್ಯೆಗಳನ್ನು ತುರ್ತಾಗಿ ಪರಿಹರಿಸಲು ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯ ನಿರ್ವಹಿಸಬೇಕು ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಕುಂದಗೋಳದ ಪ್ರವಾಸಿ ಮಂದಿರದಲ್ಲಿ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ ಅವರು ಮಾತನಾಡಿದರು.

ಎಲ್ಲ ಅಧಿಕಾರಿಗಳು ಕುಂದಗೋಳದಲ್ಲಿ ವಾಸ ಮಾಡಿ, ತಮ್ಮ ವ್ಯಾಪ್ತಿಗೆ ಬರುವ ಸಮಸ್ಯೆಗಳನ್ನು ಪರಿಹರಿಸಬೇಕು. ಒಂದು ವಾರದೊಳಗೆ ಅಧಿಕಾರಿಗಳು ಕುಂದಗೋಳಕ್ಕೆ ಸ್ಥಳಾಂತರಗೊಳ್ಳಬೇಕು. ಇಲ್ಲದಿದ್ದರೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ತಾಲೂಕು ಆಸ್ಪತ್ರೆ ಸೋರುತ್ತಿದೆ. ಆಸ್ಪತ್ರೆಯ ಸ್ವಚ್ಛತೆ ಕಾಪಾಡಬೇಕು. ಆಸ್ಪತ್ರೆಯಲ್ಲಿನ ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗಳ ಗಮನಕ್ಕೆ ತರಬೇಕು. ಆಸ್ಪತ್ರೆ ಸ್ವಚ್ಛತೆಗೆ ಎನ್.ಎಸ್.



> ಮದ್ಯ ಕಳ್ಳ ಸಾಗಾಣಿಕೆ ಹಾಗೂ ಮಾರಾಟ ಮಾಡಬಾರದು. ಮದ್ಯದ ಅಂಗಡಿಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಬೇಕು. ಯಾವುದೇ ಅಂಗಡಿಯಲ್ಲಿ ಕಳ್ಳ ಸಾಗಾಣಿಕೆ ಮಾಡುತ್ತಿದ್ದರೆ ಅವರ ಪರವಾನಗಿ ರದ್ದು ಪಡಿಸಲಾಗುವುದು. ಅಂತವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ತಾಂಡಾಗಳಲ್ಲಿ ಹೆಚ್ಚಾಗಿ ಕಳ್ಳ ಸಾಗಾಣಿಕೆಯಾಗುವುದನ್ನು ತಡೆಯಬೇಕು. ಪೊಲೀಸ್ ಇಲಾಖೆಯವರು ಕಾನೂನು ಸುವ್ಯವಸ್ಥೆ ಕಾಪಾಡಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯಬಾರದು.
>
> **-ಸಂತೋಷ ಲಾಡ್**, ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು.

ಎಸ್ ಹಾಗೂ ರೋಟರಿ ಕ್ಲಬ್ ಸಹಕಾರ ಕೋರಬೇಕು. ಹೆಚ್ಚಿನ ಸಿಬ್ಬಂದಿಗಳನ್ನು ಆದಷ್ಟು ಬೇಗನೆ ನೇಮಿಸಲಾಗುವುದು ಎಂದು ತಾಲೂಕು ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಚಾಕಲಬ್ಬಿ ಸೇತುವೆ ಸಮಸ್ಯೆಯನ್ನು ತುರ್ತಾಗಿ ಬಗೆಹರಿಸಿ. ನರೇಗಾ ಯೋಜನೆಯಡಿ ವಿವಿಧ ಕಾಮಗಾರಿ ಕೈಗೊಳ್ಳಲು ಅವಕಾಶವಿದೆ. ಹೂಳು, ಗಿಡ ಮರ ಕತ್ತರಿಸುವುದು ಸೇರಿದಂತೆ ವಿವಿಧ ಕೆಲಸಗಳನ್ನು ಕೈಗೊಳ್ಳಬಹುದು. ತಾಲೂಕಿನಲ್ಲಿ ಉತ್ತಮ ಬಿತ್ತನೆಯಾಗಿದೆ. ರಸಗೊಬ್ಬರ ಕೊರತೆಯಾಗಬಾರದು. ಜುಲೈ 31 ರವರೆಗೆ ಬೆಳೆ ವಿಮೆಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಬೆಳೆ ಸಾಲ ಕುರಿತು ಅಧಿಕಾರಿಗಳ ಜೊತೆ ಚರ್ಚಿಸಿ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಗೃಹಜ್ಯೋತಿ ಯೋಜನೆಯಡಿ ಕೈ ಬಿಟ್ಟು ಹೋಗಿರುವವರನ್ನು ಯೋಜನೆಗೆ ಒಳಪಡಿಸಬೇಕು. ಆಗಸ್ಟ್ 5 ರೊಳಗೆ ಯೋಜನೆಗೆ ಸೇರಿಸಿರಿ. ಜಾನುವಾರಗಳ ಬಗ್ಗೆ ನಿಗಾವಹಿಸಬೇಕು. ಯಾಕೆಂದರೆ ಎತ್ತುಗಳು ಕಡಿಮೆಯಾಗುತ್ತಿವೆ. ಶಾಲೆಗಳು, ರಸ್ತೆಗಳ ಪಕ್ಕದಲ್ಲಿ ಗಿಡ ನೆಡಬೇಕು. ಬೇವು, ಹುಣಸೆ, ಹಣ್ಣುಗಳ ಗಿಡಗಳನ್ನು ಹೆಚ್ಚಾಗಿ ನೆಡಬೇಕು. ಕ್ರೀಡಾ ಸಂಕೀರ್ಣ ಹಾಗೂ ಬಸ್ ನಿಲ್ದಾಣಕ್ಕಾಗಿ ಎಪಿಎಂಸಿಯಲ್ಲಿ ಜಾಗವನ್ನು ಕಲ್ಪಿಸಲಾಗುವುದು. ಸ್ಲಂನಲ್ಲಿ ವಾಸಿಸುವವರಿಗೆ ಶೀಘ್ರದಲ್ಲಿ ಮನೆ ನಿರ್ಮಿಸಬೇಕು. ಜನರಿಗೆ ಕುಡಿಯುವ ನೀರು, ಸಮರ್ಪಕವಾಗಿ ವಿದ್ಯುತ್ ಒದಗಿಸಬೇಕು ಎಂದರು.

ಶಾಸಕರಾದ ಎಂ.ಆರ್.ಪಾಟೀಲ, ಜಿಲ್ಲಾಧಿಕಾರಿ ಗುರುದತ ಹೆಗಡೆ, ಉಪವಿಭಾಗಾಧಿಕಾರಿ ಅಶೋಕ ತೇಲಿ, ಕುಂದಗೋಳ ತಹಸೀಲ್ದಾರ್ ಶೈಲೇಶ ಪರಮಾನಂದ, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಹೇಶ ಕುರಿಯವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇತರರು ಉಪಸ್ಥಿತರಿದ್ದರು.

# ನಿಸ್ವಾರ್ಥ ಸೇವೆಗೆ ಮತ್ತೊಂದು ಹೆಸರು ರೋಟರಿ ಸಂಸ್ಥೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಅಮೇರಿಕಾದ ವಕೀಲರಾದ ಪಾಲ್ ಹೆರಿಸ್ ಹಾಗೂ ಅವರ ಮೂವರು ಮಿತ್ರರೊಂದಿಗೆ ಸ್ಥಾಪಿಸಿದ ರೋಟರಿ ಸಂಸ್ಥೆಯು ಇಂದು ಜಗತ್ತಿನ 186 ದೇಶಗಳಲ್ಲಿ 36 ಸಾವಿರಕ್ಕೂ ಹೆಚ್ಚು ಸಂಸ್ಥೆಗಳನ್ನು ಹೊಂದಿದ್ದು, 12 ಲಕ್ಷಕ್ಕೂ ಹೆಚ್ಚು ಸದಸ್ಯರನ್ನೊಂಡ ಬೃಹತ್ ಸಂಸ್ಥೆಯಾಗಿದೆ. ಪ್ರತಿ ನಿಮಿಷ ಜಗತ್ತಿನ ಯಾವುದಾದರೂ ಒಂದು ಮೂಲೆಯಲ್ಲಿ ರೋಟರಿ ಸಂಸ್ಥೆಯಿಂದ ಸಮಾಜಮುಖಿ ಕಾರ್ಯಕ್ರಮ ಜರಗುತ್ತಿರುವುದು ಹೆಮ್ಮೆಯ ವಿಷಯ ಎಂದು ನಗರದ ಖ್ಯಾತ ಇಎನ್‌ಟಿ ತಜ್ಞರಾದ ರೊ.ಡಾ. ಆರ್ ಎಸ್ ಬಳ್ಳಾರಿ ಅಭಿಪ್ರಾಯಪಟ್ಟರು. ರೋಟರಿ ಸಂಸ್ಥೆ ಗದಗ-ಬೆಟಗೇರಿಯ ಸಾಪ್ತಾಹಿಕ ಸಭೆಯಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಸಭೆಯಲ್ಲಿ ಕರಾಟೆ ಪಟು ಗಂಗಾಧರ ವೆಂಕಟೇಶ ಸಿಪ್ರಿ ಹಾಗೂ ಕರಾಟೆ ತರಬೇತಿದಾರ ಗಯಬು ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿದ ಗಂಗಾಧರ ಸಿಪ್ರಿ, ರೋಟರಿ ಸಂಸ್ಥೆಯು ನೀಡಿದ ಈ ಗೌರವಕ್ಕೆ ಚಿರಋಣಿಯಾಗಿದ್ದೇನೆ. ಇನ್ನೂ ಹೆಚ್ಚಿನ ಸಾಧನೆ ಮಾಡಲು ಪ್ರೇರಣೆ ನೀಡಿದಂತಾಗಿದೆಯೆಂದರು.

ಸಂಸ್ಥೆಯ ಅಧ್ಯಕ್ಷ ಚಂದ್ರಮೌಳಿ ಜಾಲಿ ಸರ್ವರನ್ನೂ ಸ್ವಾಗತಿಸಿದರು. ರೊ. ಸುರೇಶ ಕುಂಬಾರ ಅತಿಥಿಗಳಾಗಿ ಪಾಲ್ಗೊಂಡರು. ರೊ. ಶ್ರೀಧರ ಸುಲ್ತಾನಪೂರ ಹಾಗೂ ರೊ. ಆರ್ ಎಸ್ ಬುರಡಿ ಅತಿಥಿಗಳನ್ನು ಪರಿಚಯಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಸದಸ್ಯರಾದ ಡಾ. ಆರ್ ಬಿ ಉಪ್ಪಿನ, ನರೇಶ ಜೈನ, ಬಾಲಕೃಷ್ಣ ಕಾಮತ್, ವಿಶ್ವನಾಥ ಯಳಮಲಿ, ಡಾ ಪ್ರದೀಪ ಉಗಲಾಟ, ಎಮ್ ಬಿ ಬಾತಾಖಾನಿ, ಸಂತೋಷ ಅಕ್ಕಿ, ಶಿವಾಚಾರ್ಯ ಹೊಸಳ್ಳಿಮಠ, ಶೈಲೇಂದ್ರ ಬಿರಾದಾರ, ಅಕ್ಷಯ ಶೆಟ್ಟಿ, ಡಾ. ಉಮೇಶ ಪುರದ ಪಾಲ್ಗೊಂಡಿದ್ದರು. ಕಾರ್ಯದರ್ಶಿ ರೊ. ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಫ್ರೆಷರ್ಸ್ ಡೇ ಹಾಗೂ ಸನ್ಮಾನ ಸಮಾರಂಭದಲ್ಲಿ ಸಾಹಿತಿ ಪ್ರೊ.ಸಿದ್ದು ಯಾಪಲಪರವಿ

# ಸಾಧನೆಗೆ ಸಮಯಪ್ರಜ್ಞೆ-ಛಲ ಬೆಳೆಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜೀವನದಲ್ಲಿ ಸಾಧನೆ ಮಾಡಬೇಕಾದರೆ ವಿದ್ಯಾರ್ಥಿಗಳು ಉನ್ನತವಾದ ಗುರಿ ಹೊಂದಿ ಶ್ರದ್ಧೆ, ಸತತಾಭ್ಯಾಸ, ಸಮಯಪ್ರಜ್ಞೆ, ಛಲ ಬೆಳೆಸಿಕೊಂಡಾಗ ಅಂದುಕೊಂಡ ಗುರಿ ಸಾಧ್ಯವಾಗುತ್ತದೆ ಎಂದು ಹಿರಿಯ ಸಾಹಿತಿ ತಿಮ್ಮಾಪುರದ ಕೆವ್ಹಿಎಸ್‌ಆರ್ ಕಾಲೇಜಿನ ಪ್ರಾಚಾರ್ಯ ಪ್ರೊ. ಸಿದ್ದು ಯಾಪಲಪರವಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಿಸಿಎನ್ ಸಿರಿ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ಪ್ರಥಮ ವರ್ಷದ ವಿದ್ಯಾರ್ಥಿಗಳನ್ನು ಸ್ವಾಗತಿಸುವ ಫ್ರೆಷರ್ಸ್ ಡೇ ಮತ್ತು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿದ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಜನೆಗಾಗಿ ಬಂದಿರುವ ವಿದ್ಯಾರ್ಥಿಗಳು ಅದನ್ನು ಹೊರತು ಪಡಿಸಿ ಅನೇಕ ದುಶ್ಚಟಗಳಿಗೆ ದಾಸರಾಗುವದರಿಂದ ಜೀವನವು ಹಾಳಾಗುವದರ ಜೊತೆಗೆ ತಂದೆ ತಾಯಿಗಳ ಆಸೆಗಳನ್ನು ಸಹ ನುಚ್ಚುನೂರು ಮಾಡಿದಂತಾಗುತ್ತದೆ. ಅದಕ್ಕಾಗಿ ಉತ್ತಮ ಸಾಧನೆ ಮಾಡುವ ಗುರಿಯೊಂದಿಗೆ ಶಿಕ್ಷಕರ ಮಾರ್ಗದರ್ಶನದಲ್ಲಿ ಸಾಗಿ ಸಾಧನೆ




ಮಾಡುವ ಮೂಲಕ ಕಲಿತ ಸಂಸ್ಥೆಗೆ ಹಾಗೂ ಪಾಲಕರಿಗೆ ಕೀರ್ತಿ ತರುವ ನಿಟ್ಟಿನಲ್ಲಿ ಸಾಗುವಂತೆ ಕರೆನೀಡಿದರು.

ಅಧ್ಯಕ್ಷತೆ ವಹಿಸಿದ್ದ ಬಿಸಿಎನ್ ವಿದ್ಯಾಸಂಸ್ಥೆಯ ನಿರ್ದೇಶಕ ಲೋಹಿತ್ ನೆಲವಿಗಿ ಮಾತನಾಡಿ, ಪಿಯುಸಿ ಹಂತದಲ್ಲಿ ಇರುವ ವಿದ್ಯಾರ್ಥಿಗಳು ಎರಡು ವರ್ಷಗಳ ಈ ಅವಧಿಯನ್ನು ತಪಸ್ಸಿನ ರೂಪದಲ್ಲಿ ಮುಗಿಸಿದರೆ ಉತ್ತಮ ಭವಿಷ್ಯ ನಿಮ್ಮದಾಗುವದರಲ್ಲಿ ಯಾವುದೇ ಸಂಶಯವಿಲ್ಲ. ನಿತ್ಯ ಅಭ್ಯಾಸ ಮಾಡುವಾಗ ನಿಮ್ಮ ಕಣ್ಣ ಮುಂದೆ ಉನ್ನತ ಗುರಿ ಇದ್ದು ಅದನ್ನು ಸಾಧಿಸುವ ನಿಟ್ಟಿನಲ್ಲಿ ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸ ಪೂರೈಸುವ ನಿಟ್ಟಿನಲ್ಲಿ ಪಟ್ಟಣದ ಬಿಸಿಎನ್ ಸಿರಿ ಕಾಲೇಜು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿದೆ ಅದರ ಸದುಪಯೋಗ ಪಡೆದುಕೊಂಡು ಸಾಗಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸಿರಿ ಅಕ್ಯಾಡಮಿ ಸಿಇಓ ಕೆ.ಎಸ್.ರಾವ್, ನಿರ್ದೇಶಕಿ ಡಾ.ರೇವತಿ ನೆಲವಿಗಿ, ಪ್ರಾಚಾರ್ಯ ವಿಜಯಕುಮಾರ, ಅಜನೀಶ ಮಾನ್ವಿ, ಹಾಗೂ ಡಿ.ಎಂ.ಪೂಜಾರ ಉಪಸ್ಥಿತರಿದ್ದರು. ಉಪನ್ಯಾಸಕರಾದ ಗಿರೀಶ ರಡ್ಡಿ, ಚಂದ್ರು ಕಂಗೂರಿ, ಅಭಿಲಾಷ್, ಭಾರತಿ, ನಾಗರತ್ನಾ, ಗಂಗಾ ಮರಡೂರ, ಖುಷಾ ಅರಳಿ, ಪ್ರೀತಿ, ಅಜಮೀರ, ಭಾಷಾ, ಚಂದ್ರು ಬಂಡಿವಾಡ, ಅಶೋಕ ಪೂಜಾರ, ಸುಜಾತಾ, ಹಾಗೂ ಸಿಬ್ಬಂದಿಗಳು ಹಾಜರಿದ್ದರು. ವಿದ್ಯಾರ್ಥಿನಿಯರಾದ ತೇಜು, ಕಾವ್ಯಾ, ಅಕ್ಷತಾ, ಭೂಮಿಕಾ, ಚೈತ್ರಾ, ಮತ್ತಿತರರು ನಿರೂಪಿಸಿದರು. ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

# ಮುಕ್ತ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕೋರ್ಸುಗಳ ಪ್ರವೇಶ ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2023-24ನೇ (ಜುಲೈ ಆವೃತ್ತಿ) ಶೈಕ್ಷಣಿಕ ಸಾಲಿಗೆ ಪ್ರವೇಶ ಪ್ರಕ್ರಿಯೆ ಆರಂಭಿಸಿದ್ದು, ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿ.ಕಾಂ, ಬಿ.ಲಿಬ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ ಹಾಗೆಯೇ ಎಂ.ಎ-ಪತ್ರಿಕೋದ್ಯಮ. ಸ್ನಾತಕೋತ್ತರ ಪದವಿಗಳಾದ ಎಂ.ಕಾಂ, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಗದಗ ಪ್ರಾದೇಶಿಕ ಕೇಂದ್ರದಲ್ಲಿ ಮಹಿಳಾ ಮತ್ತು ಪುರುಷ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಅವಕಾಶ ಕಲ್ಪಿಸಿದೆ. ಈ ಪ್ರಕ್ರಿಯೆ ಜೂನ್ 30ರಂದು ಪ್ರಾರಂಭವಾಗಿ ಆಗಸ್ಟ್ 31ರಂದು ಮುಕ್ತಾಯಗೊಳ್ಳುತ್ತದೆ.

ಹಾಗಾಗಿ ವಿದ್ಯಾರ್ಥಿಗಳು ಅರ್ಜಿಗಳನ್ನು ಅಧಿಕೃತ ವೆಬ್‌ಸೈಟ್ www.ksoumysuru.ac.in ನಲ್ಲಿ KSOU Admission Portal ಮೂಲಕ ಪದವಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿಮಾಡಿ ನಂತರ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶ ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ್.ಬಿ.ಎನ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ: ಸಿದ್ಧಾರ್ಥ್.ಬಿ.ಎನ್, ಪ್ರಾದೇಶಿಕ ನಿರ್ದೇಶಕರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ರೈತ ಭವನ, ಜನರಲ್ ಕಾರಿಯಪ್ಪ ವೃತ್ತ, ಗದಗ-582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ:8618929376ರನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಕೊಣ್ಣೂರ ಗ್ರಾ ಪಂ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ನರಗುಂದ**

ತಾಲೂಕಿನ ಕೊಣ್ಣೂರ ಗ್ರಾಮ ಪಂಚಾಯಿತಿಯ 2ನೇ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಚುನಾವಣೆ ಶುಕ್ರವಾರ ಜರುಗಿತು.

ಸಾಮಾನ್ಯ ಮಹಿಳೆ ಅಧ್ಯಕ್ಷ ಸ್ಥಾನಕ್ಕೆ ಮೆಹಬೂಬಿ ಹುಸೇನಸಾಬ ಮುದಕವಿ ಹಾಗೂ ಹಿಂದುಳಿದ ಬ ವರ್ಗ ಉಪಾಧ್ಯಕ್ಷ ಸ್ಥಾನಕ್ಕೆ ಸಂಕನಗೌಡ ಬಸನಗೌಡ ಪಾಟೀಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಮಂಜುಳಾ ಹಕಾರಿ ಘೋಷಿಸಿದ್ದಾರೆ.

ನೂತನವಾಗಿ ಆಯ್ಕೆಗೊಂಡ ಅಧ್ಯಕ್ಷ, ಉಪಾಧ್ಯಕ್ಷರನ್ನು ಕೊಣ್ಣೂರ ಗ್ರಾಮದ ಹಿರಿಯರು, ಸ್ಥಳೀಯ



ಕಾಂಗ್ರೆಸ್ ಪಕ್ಷದ ಪ್ರಮುಖರು, ಕಾರ್ಯಕರ್ತರು ಮತ್ತು ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಅಧಿಕಾರಿಗಳು ಅಭಿನಂದಿಸಿದರು.

ಗ್ರಾ ಪಂ ಸದಸ್ಯರಾದ ಮಲ್ಲನಗೌಡ ಯಲ್ಲಪ್ಪಗೌಡ್ರ, ಬಿಬಿಜಾನ ನರಗುಂದ, ಭೀಮಪ್ಪ ಹೂರಕೇರಿ, ಹನುಮಂತ ಅಣ್ಣಿಗೇರಿ, ಹನುಮಂತ ಚಿನ್ನಾರ, ಸಿದ್ದರಾಜ ಅಣ್ಣಿಗೇರಿ, ಜಯಶ್ರೀ ಶಿವಪ್ಪಯ್ಯನವರಮಠ, ಸಿದ್ದವ್ವ ಕಳಸಣ್ಣವರ, ಹುಸೇನಬಿ ಬುರಡಿ, ಪ್ರಕಾಶ ಚಂದಣ್ಣವರ, ಚಾಂದಬೀಬಿ ಸನ್ನಿ, ಮಮತಾಜಬೇಗಂ ಕುರ್ಲಗೇರಿ, ಗೂಳಪ್ಪ ಹುಜರತ್ತಿ, ಬಸವರಾಜ ಶೇಲ್ಲಿಕೇರಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುನಾಥ ಗಣಿ ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಗದಗ ಜಿಲ್ಲೆಯಲ್ಲಿ ಮಳೆ; ಮನೆ ಹಾನಿ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಜುಲೈ 1 ರಿಂದ 28 ರವರೆಗೆ ಜಿಲ್ಲೆಯಲ್ಲಿ 118 ಮಿ.ಮೀ. ಮಳೆಯಾಗಿದ್ದು, ವಾಡಿಕೆ ಮಳೆ 61 ಮಿ.ಮೀ ಇದ್ದು, ಶೇ.93 ರಷ್ಟು ಹೆಚ್ಚಿಗೆ ಮಳೆಯಾಗಿದೆ. ಮಳೆಯಿಂದಾಗಿ ಜಿಲ್ಲೆಯಲ್ಲಿ 192 ಮನೆಗಳು ಭಾಗಶ: ಹಾನಿಗಿಡಾಗಿವೆ. ತಾಲೂಕಾವಾರು ವಿವರ: ಗದಗ-73, ಗಜೇಂದ್ರಗಡ-15, ಲಕ್ಷ್ಮೇಶ್ವರ-46, ಮುಂಡರಗಿ-8 ನರಗುಂದ-19, ರೋಣ-4, ಶಿರಹಟ್ಟಿ-27

**ಜಲಾಶಯ ಮಟ್ಟದ ವಿವರ:**

ನವಿಲು ತೀರ್ಥ ಜಲಾಶಯ 37.785 ಟಿ.ಎಂ.ಸಿ. ಸಾಮರ್ಥ್ಯ ಹೊಂದಿದ್ದು, ಈವರೆಗೆ 18.311 ಟಿ.ಎಂ.ಸಿ. ನೀರು ಸಂಗ್ರಹವಾಗಿದೆ. ನೀರಿನ ಒಳ ಹರಿವು 12821 ಕ್ಯೂಸೆಕ್ಸ ಇದ್ದು ಹೊರ ಹರಿವು 194 ಕ್ಯೂಸೆಕ್ಸ ಇದೆ. ಭದ್ರಾ ಜಲಾಶಯ 71.535 ಟಿ.ಎಂ.ಸಿ. ಸಾಮರ್ಥ್ಯ ಹೊಂದಿದೆ. ಈವರೆಗೆ 38271 ಟಿ.ಎಂ.ಸಿ. ನೀರು ಸಂಗ್ರಹವಾಗಿದ್ದು, ನೀರಿನ ಒಳ ಹರಿವು 16041 ಕ್ಯೂಸೆಕ್ಸ ಇದ್ದು, ಹೊರ ಹರಿವು 185 ಕ್ಯೂಸೆಕ್ಸ ಇದೆ.

ಚೀಟಿ ಎತ್ತುವ ಮೂಲಕ ಅಧ್ಯಕ್ಷರಾಗಿ ಆಯ್ಕೆಯಾದ ಪ್ರೇಮಕ್ಕ

# ಅಡರಕಟ್ಟಿ ಗ್ರಾಮ ಪಂಚಾಯತಿಗೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಅಡರಕಟ್ಟಿ ಗ್ರಾಪಂ ಅಧ್ಯಕ್ಷರಾಗಿ ಪ್ರೇಮಕ್ಕ ಮಾನಪ್ಪ ಲಮಾಣಿ, ಉಪಾಧ್ಯಕ್ಷರಾಗಿ ಕಾಶವ್ವ ಆರ್ ದೊಡ್ಡಮನಿ ಆಯ್ಕೆಯಾದರು.

ಒಟ್ಟು 11 ಸದಸ್ಯರನ್ನೊಳಗೊಂಡ ಗ್ರಾಪಂ ಅಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮತ್ತು ಉಪಾಧ್ಯಕ್ಷ ಸ್ಥಾನ ಎಸ್‌ಸಿ ಮಹಿಳೆಗೆ ಮೀಸಲಾಗಿತ್ತು. ಚುನಾವಣೆ ಆಯ್ಕೆ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಪವಿತ್ರ ಎಂ ಗಡೆಪ್ಪನವರ, ಪ್ರೇಮಕ್ಕ ಲಮಾಣಿ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಕಾಶವ್ವ ದೊಡ್ಡಮನಿ, ಕಮಲವ್ವ ಲಮಾಣಿ ನಾಮಪತ್ರ ಸಲ್ಲಿಸಿದ್ದರು.

ಮತದಾನ ಪ್ರಕ್ರಿಯೆಯಲ್ಲಿ ಓರ್ವ ಸದಸ್ಯರು ಗೈರಾಗಿದ್ದರಿಂದ ಇಬ್ಬರಿಗೂ ತಲಾ 5 ಮತಗಳು ಲಭಿಸಿ ಚೀಟಿ ಎತ್ತುವ ಅದೃಷ್ಟದಾಟದಲ್ಲಿ ಪ್ರೇಮಕ್ಕ ಲಮಾಣಿ ಅಧ್ಯಕ್ಷೆಯಾಗಿ, ಕಾಶವ್ವ ಲಮಾಣಿ ಉಪಾಧ್ಯಕ್ಷೆಯಾಗಿ ಆಯ್ಕೆಯಾದರು. ಎ.ಪಿ ಸುಗಂಧಿ ಚುನಾವಣಾಧಿಕಾರಿಯಾಗಿದ್ದರು.

ಈ ವೇಳೆ ಸದಸ್ಯರಾದ ನಿಂಗಪ್ಪ ಪ್ಯಾಟಿ, ಸೋಮಣ್ಣ ಹವಳದ, ಹರೀಶ ಲಮಾಣಿ, ಲಕ್ಷ್ಮೀ ಕಾರಬಾರಿ, ಸೋಮಪ್ಪ ಲಮಾಣಿ ಸೇರಿ ಸರ್ವ ಸದಸ್ಯರು, ಸಿಬ್ಬಂದಿ, ಹಿರಿಯರಿದ್ದರು.

# ಗೋವನಾಳ ಗ್ರಾ ಪಂ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಗೋವನಾಳ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಮಂಜನಗೌಡ ನಿಂಗನಗೌಡ ಕೆಂಚನಗೌಡ್ರ ಮತ್ತು ಉಪಾಧ್ಯಕ್ಷರಾಗಿ ನಿರ್ಮಲಾ ಚಂದ್ರಶೇಖರ ತಳವಾರ ಅವಿರೋಧ ಆಯ್ಕೆಯಾಗಿದ್ದಾರೆ.

ಒಟ್ಟು 8 ಸದಸ್ಯ ಸ್ಥಾನಗಳನ್ನು ಹೊಂದಿರುವ ಗ್ರಾ ಪಂ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ, ಉಪಾಧ್ಯಕ್ಷ ಸ್ಥಾನ ಅ ವರ್ಗದ ಮಹಿಳೆಗೆ ಮೀಸಲಾಗಿತ್ತು.

ಶುಕ್ರವಾರ ನಡೆದ ಚುನಾವಣೆಯಲ್ಲಿ ಇಬ್ಬರು ಸದಸ್ಯರು ಗೈರಾಗಿದ್ದರು. ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಒಂದೊಂದೇ



ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಚುನಾವಣಾಧಿಕಾರಿ ಎಂ ಎಂ ಹವಳದ ಅವಿರೋಧ ಆಯ್ಕೆ ಘೋಷಿಸಿದರು. ಈ ವೇಳೆ ಗ್ರಾ ಪಂ ಸದಸ್ಯರಾದ ಸುಶೀಲವ್ವ ಮರಿಲಿಂಗನಗೌಡ್ರ, ಸುಧಾ ಮಾದರ, ಅಣ್ಣಪ್ಪ ರಾಮಗೇರಿ, ಕರಿಯಪ್ಪಗೌಡ ಹೊಸಗೌಡ್ರ ಸೇರಿದಂತೆ ಗ್ರಾ ಪಂ ಸಿಬ್ಬಂದಿ, ಹಿರಿಯರು ಪಾಲ್ಗೊಂಡಿದ್ದರು.

# ನೀರನ್ನು ಕಾಯಿಸಿ ಆರಿಸಿ ಕುಡಿಯಿರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ತುಂಗಭದ್ರಾ ಜಲಾಶಯದಿಂದ ಮಣ್ಣು ಮಿಶ್ರಿತ(ಪ್ರಕ್ಷುಬ್ಧತೆ) ನೀರು ಹರಿದು ಬರುತ್ತಿದ್ದು, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನೀರು ಶುದ್ಧೀಕರಣ ಘಟಕವು 500 NTU ಗಡಸುತನದವರೆಗೆ ಬರುವ ನದಿ ನೀರನ್ನು ಶುದ್ಧೀಕರಿಸಲು ವಿನ್ಯಾಸವಿದ್ದು, ಮಳೆ ಪ್ರಮಾಣ ಹೆಚ್ಚಾಗಿ ಈಗ ಬರುವಂತಹ ನದಿ ನೀರು ಅಕ್ಕ ಪಕ್ಕದಲ್ಲಿರುವ ಸ್ಥಳೀಯ ಹಳ್ಳಗಳಿಂದ ಕೂಡಿಕೊಂಡಿರುವುದರಿಂದ ಸದರಿ ನೀರು ಸುಮಾರು 650 ಓಖಿಗ ದಿಂದ 750 NTU ವರೆಗೆ ಹೆಚ್ಚಾಗಿರುತ್ತದೆ. ಸದರಿ ನೀರು ಶುದ್ಧೀಕರಣ ಮಾಡುವ ಘಟಕದಲ್ಲಿ ನಿಗಧಿತ ವೇಳೆಯಲ್ಲಿ ನೀರು ಶುದ್ಧೀಕರಿಸಲು ಕಷ್ಟಸಾಧ್ಯವಾಗಿರುತ್ತದೆ. ಗದಗ ಜಿಲ್ಲೆಯ ಗದಗ, ಮುಂಡರಗಿ ಮತ್ತು ಶಿರಹಟ್ಟಿ ತಾಲೂಕು ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಭಾಗದ ಜನರು ಮತ್ತು ಮುಂಡರಗಿ ಪಟ್ಟಣದ ಸಾರ್ವಜನಿಕರು ಗ್ರಾಮದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕದಿಂದ ಬರುವ ನೀರನ್ನು ಕುಡಿಯಲು ಉಪಯೋಗಿಸುವುದು ಅನಿವಾರ್ಯತೆ ಸಂದರ್ಭದಲ್ಲಿ ಸದರಿ DBOT ನೀರನ್ನು ಸಾರ್ವಜನಿಕರು ಕಾಯಿಸಿ ಆರಿಸಿ ಸೋಯಿಸಿ ಕುಡಿಯಬೇಕೆಂದು ಪ್ರಕಟಣೆ ತಿಳಿಸಿದೆ.

# ವಿಧಾನ ಪರಿಷತ್ತಿನ ಕುರಿತು ಕಿರುಚಿತ್ರ: ಸಭೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಶತಮಾನೋತ್ಸವ ಕಂಡ ಕರ್ನಾಟಕ ವಿಧಾನ ಪರಿಷತ್ತಿನ ಕುರಿತು ಸಮಗ್ರ ಮಾಹಿತಿಯುಳ್ಳ ಕಿರುಚಿತ್ರ ನಿರ್ಮಿಸುವ ಕುರಿತು ಸಭಾಪತಿ ಬಸವರಾಜ್ ಹೊರಟ್ಟಿ ಅವರ ನೇತೃತ್ವದಲ್ಲಿ ಸಭೆ ನಡೆಸಲಾಯಿತು.

ವಿಧಾನ ಪರಿಷತ್ ನಡೆದು ಬಂದ ದಾರಿ, ವಿಧಾನ ಪರಿಷತ್ತಿನ ಮಹತ್ವ, ಶತಮಾನ ಕಂಡ ಈ ಮೇಲ್ಮನೆಯ ಹೆಜ್ಜೆ ಗುರುತುಗಳನ್ನು ದಾಖಲಿಸಿ, ಮುಂದಿನ ಪೀಳಿಗೆಗೆ ನೀಡುವ ಮಹತ್ಕಾರ್ಯದಲ್ಲಿ ವಿಧಾನ ಪರಿಷತ್ತಿನ ಸದಸ್ಯರು,



ಮಾಜಿ ಸದಸ್ಯರು, ಹಲವಾರು ಗಣ್ಯಮಾನ್ಯರು ಸಭೆಯಲ್ಲಿ ಭಾಗವಹಿಸಿ ಹಲವಾರು ಸಲಹೆ-ಸೂಚನೆಗಳನ್ನು ನೀಡಿದರು. ಈ ಕಾರ್ಯ ಶೀಘ್ರವೇ ಪೂರ್ಣಗೊಂಡು ನಾಡಿಗೆ ಅರ್ಪಣೆಯಾಗಲಿ. ನಮ್ಮಲ್ಲಿರುವ ಎಲ್ಲ ಮಾಹಿತಿಗಳನ್ನು, ದಾಖಲೆಗಳನ್ನು, ಸಂಗತಿಗಳನ್ನು ಒದಗಿಸುತ್ತೇವೆಂದು ಸಭೆಯಲ್ಲಿ ಸೇರಿದ ಸರ್ವರೂ ತಿಳಿಸಿದರು.

# ಕರ್ನಾಟಕದಲ್ಲಿ ಹುಲಿ ಸಂತತಿ ಹೆಚ್ಚಳ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ಅರಣ್ಯ ಇಲಾಖೆ ನಿನ್ನೆ ಗುರುವಾರ ಬಿಡುಗಡೆ ಮಾಡಿರುವ ಹುಲಿ ಅಂದಾಜು ವರದಿಯಲ್ಲಿ ಕರ್ನಾಟಕದಲ್ಲಿ ಹುಲಿಗಳ ಸಂಖ್ಯೆಯಲ್ಲಿ ಏರಿಕೆ ಕಂಡುಬಂದಿದೆ. ನಾಳೆ ಜುಲೈ 29, ವಿಶ್ವ ಹುಲಿ ದಿನ ಆಚರಿಸಲಾಗುತ್ತಿದ್ದು, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (MoEFCC) ಮತ್ತು ಭಾರತೀಯ ವನ್ಯಜೀವಿ ಸಂಸ್ಥೆ (WII) ಅಖಿಲ ಭಾರತ ಹುಲಿ ಗಣತಿ ವರದಿಯನ್ನು ಬಿಡುಗಡೆ ಮಾಡಿದಾಗ ನಿಜವಾದ ಸಂಖ್ಯೆ ಹೊರಬಂದಿದೆ.

ಇಲಾಖೆಯ ವರದಿಯ ಪ್ರಕಾರ, 2018 ರಲ್ಲಿ ಕ್ಯಾಮೆರಾ ಟ್ರ್ಯಾಪ್ ಮೂಲಕ ಎಣಿಸಿದ ಹುಲಿಗಳ ಸಂಖ್ಯೆ ಕರ್ನಾಟಕದಲ್ಲಿ 404 ಆಗಿತ್ತು, ಅದು ಈಗ 435 ಕ್ಕೆ ಏರಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka